ಸಂಪುಟ : 10 ಸಂಚಿಕೆ: 284 ಪುಟ : 4+2 ಬೆಲೆ: 3.00 ಶುಕ್ರವಾರ ಡಿಸೆಂಬರ್ 26 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ


ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 284 Pages : 4+2 Price : 3.00 Friday December 26 2025 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

### 500 ಮೆಟ್ರಿಕ್ ಟನ್ ಸಾಮರ್ಥ್ಯದ ಗೋಡಾನ್ ಕಟ್ಟಡ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದ ಸಚಿವ ಎಚ್.ಕೆ. ಪಾಟೀಲ

# ಸಹಕಾರಿ ಸಂಘಗಳು ರಾಜಕೀಯ ಬದಿಗಿಟ್ಟು ಬೆಳೆಯುವಂತಾಗಲಿ



**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ರೈತರಿಗೆ ಕಡಿಮೆ ಬಡ್ಡಿ ದರದಲ್ಲಿ ಸಾಲ ಸೌಲಭ್ಯವನ್ನು ನೀಡುವ ಮೂಲಕ ಕೃಷಿ ಹಾಗೂ ಕೃಷಿ ಉಪ ಕಸಬುಗಳಿಗೆ ಸಹಕಾರಿ ಸಂಘಗಳ ಮೂಲಕ ಸರ್ಕಾರ ಶೂನ್ಯ ಬಡ್ಡಿ ದರದಲ್ಲಿ ಸಾಲ ಸೌಲಭ್ಯವನ್ನು ವಿತರಿಸುತ್ತಿದ್ದು, ಇದರಿಂದ ರೈತರಿಗೆ ಹೆಚ್ಚು ಅನುಕೂಲವಾಗಿದೆ. ಗ್ರಾಮದಲ್ಲಿ ಸಹಕಾರಿ ಸಂಘಗಳ ಬೆಳವಣಿಗೆಯಿಂದ ಗ್ರಾಮೀಣ ಜನರ ಜೀವನ ಹಸನಾಗುವುದು ಎಂದು ರಾಜ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.

ಗದಗ ತಾಲೂಕಿನ ಮುಳಗುಂದ ಸಮೀಪದ ಸೊರಟೂರು ಗ್ರಾಮದಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಸಹಯೋಗದಲ್ಲಿ 500 ಮೆಟ್ರಿಕ್ ಟನ್ ಸಾಮರ್ಥ್ಯದ ಗೋಡಾನ್ ಕಟ್ಟಡ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಸಚಿವರು ಮಾತನಾಡಿದರು.

ಗ್ರಾಮದಲ್ಲಿನ ಸಹಕಾರಿ ಸಂಘಗಳು ರಾಜಕೀಯ ಹೊರತುಪಡಿಸಿ ಸ್ಪರ್ಧಾತ್ಮಕ ಮನೋಭಾವದಿಂದ ಬೆಳೆಯುವಂತಾಗಬೇಕು. ಅಂದಾಗ ಮಾತ್ರ ಸಹಕಾರಿ ಚಳುವಳಿಗೆ ಬಲ ಬಂದಂತಾಗುತ್ತದೆ ಎಂದರು.

ರೈತರು ಹಾಗೂ ಬಡ ಕೃಷಿಕರು ಹೆಚ್ಚಿನ ಬಡ್ಡಿಯಲ್ಲಿ ಸಾಲವನ್ನು ಪಡೆದು ಕೃಷಿ ಮಾಡುವುದು ಇಂದಿನ ದಿನಮಾನಗಳಲ್ಲಿ ಲಾಭದಾಯಕವಲ್ಲ. ಕಡಿಮೆ ಬಡ್ಡಿಯಲ್ಲಿ ಸಾಲ ಸೌಲಭ್ಯವನ್ನು ಪಡೆಯಬೇಕು. ಆ ನಿಟ್ಟಿನಲ್ಲಿ ಸರ್ಕಾರ ಬಡವರ ಪರ ಹಲವಾರು ಯೋಜನೆಗಳನ್ನು ರೂಪಿಸಿದ್ದು, ಆ ಎಲ್ಲ ಸೌಲಭ್ಯಗಳ ಸದುಪಯೋಗ ಪಡೆದುಕೊಳ್ಳುವುದರ ಜೊತೆಗೆ ಸೊರಟೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿರುವ ಎಲ್ಲ ನಾಲ್ಕು ಸಹಕಾರಿ ಸಂಘಗಳಿಗೆ ಸೌಲಭ್ಯ

▸▸3ನೇ ಪುಟಕ್ಕೆ

ಕೆಸಿಸಿ ಬ್ಯಾಂಕ್ ನಿರ್ದೇಶಕ ಮಲ್ಲಪ್ಪ ಕಲ್ಲುಡಿ ಮಾತನಾಡಿ, ಧಾರವಾಡದ ಕೆಸಿಸಿ ಬ್ಯಾಂಕ್ ಆರ್ಥಿಕ ಮುಗ್ಗಟ್ಟು ಎದುರಿಸುತ್ತಿದ್ದ ಸಂದರ್ಭದಲ್ಲಿ ಸಚಿವರಾದ ಹೆಚ್.ಕೆ. ಪಾಟೀಲ ಹಾಗೂ ಡಿ.ಆರ್. ಪಾಟೀಲರ ವಿಶೇಷ ಕಾಳಜಿಯಿಂದ ಪಟ್ಟಣದ ಅರ್ಬನ್ ಬ್ಯಾಂಕ್ ಫೆಡರೇಷನ್ ವತಿಯಿಂದ 48 ಕೋಟಿ ರೂಗಳ ಠೇವಣಿಯನ್ನು ಇಡುವ ಮೂಲಕ ಧಾರವಾಡ ಕೆಸಿಸಿ ಬ್ಯಾಂಕ್ ಪುನಶ್ಚೇತನಗೊಳಿಸುವಲ್ಲಿ ಸಹಾಯ ಮಾಡಿದ್ದರು. ಇಂದು ಧಾರವಾಡ ಕೆಸಿಸಿ ಬ್ಯಾಂಕ್ ಇಷ್ಟು ಎತ್ತರದಲ್ಲಿ ಬೆಳೆಯಲು ಹಾಗೂ ಏಷ್ಯಾ ಖಂಡದಲ್ಲಿ ಮೊದಲು ಸ್ಥಾಪನೆಯಾದ ಕಣಗಿನಹಾಳ ಸಹಕಾರಿ ಸಂಘ ಪುನಶ್ಚೇತನಗೊಳ್ಳಲು ಎಚ್.ಕೆ. ಪಾಟೀಲರು ಮಾಡಿದ ಸಹಾಯ ಮರೆಯಲು ಸಾಧ್ಯವಿಲ್ಲ ಎಂದರು.

ರಾಜ್ಯದ ತಲಾ ಆದಾಯದಲ್ಲಿ ದಕ್ಷಿಣ ಕರ್ನಾಟಕ ಮುಂದಿದ್ದು, ಉತ್ತರ ಕರ್ನಾಟಕ ಅತ್ಯಂತ ಹಿಂದಿದೆ. ಗದಗ ಜಿಲ್ಲೆಯಲ್ಲಿ ಪ್ರತಿ ವ್ಯಕ್ತಿಯ ತಲಾ ಆದಾಯ 1 ಲಕ್ಷ 94 ಸಾವಿರ ರೂ ಇದೆ. ನಾವು ಅವರಂತೆ ತಲಾ ಆದಾಯ ಹೆಚ್ಚಿಸಲು ಗ್ರಾಮೀಣ ಭಾಗದಲ್ಲಿ ರೈತರು ಹೆಚ್ಚು ಹೈನೋದ್ಯಮವನ್ನು ಕೈಗೊಳ್ಳಬೇಕು. ಆ ನಿಟ್ಟಿನಲ್ಲಿ ಸೊರಟೂರಿನ 4 ಸಹಕಾರಿ ಸಂಘಗಳು ಎರಡು ವರ್ಷದಲ್ಲಿ 500 ಜನರಿಗೆ ಹೈನುಗಾರಿಕೆ ಕೈಗೊಳ್ಳಲು ಸಾಲ ಸೌಲಭ್ಯ ನೀಡಿದೆ. ಸುಧಾರಿತ ಹೈನುಗಾರಿಕೆ ಕೈಗೊಳ್ಳಲು ಸಹಕಾರಿ ಸಂಘಗಳು ರಚನಾತ್ಮಕ ಕೆಲಸ ಮಾಡಬೇಕು ಎಂದು ಸಚಿವ ಎಚ್.ಕೆ. ಪಾಟೀಲ ತಿಳಿಸಿದರು.



### ಸಚಿವ ಎಚ್.ಕೆ. ಪಾಟೀಲರಿಂದ 'ಪ್ರಭುವಿನೆಡೆಗೆ ಪ್ರಭುತ್ವ'ದ 6ನೇ ಎಸ್‌ಓಎಸ್ ಉದ್ಘಾಟನೆ

# ಸಾರ್ವಜನಿಕರು ನಿರ್ಭಯವಾಗಿ ದೂರು ಸಲ್ಲಿಸಿ



**■ವಿಜಯಸಾಕ್ಷಿ ಸುದ್ದಿ, ಗದಗ**

'ಪ್ರಭುವಿನೆಡೆಗೆ ಪ್ರಭುತ್ವ' ಎಂಬ ವಿನೂತನ ಕಾರ್ಯಕ್ರಮವನ್ನು ಗದಗ ಜಿಲ್ಲೆಯಲ್ಲಿ ಜಾರಿಗೆ ತರಲಾಗಿದ್ದು, ಪ್ರಜಾಪ್ರಭುತ್ವದ ಆಡಳಿತದಲ್ಲಿ ಪ್ರಜೆಗಳಿಗೆ ತೀವ್ರವಾಗಿ ಸ್ಪಂದಿಸಿ, ಪಾರದರ್ಶಕತೆ ಮೆರೆಯಲು ದೊಡ್ಡ ಹೆಜ್ಜೆ ಇಟ್ಟಿದ್ದೇವೆ. ಇಂದು ಪ್ರ.ಪ್ರ ಕಾರ್ಯಕ್ರಮದ 6ನೇ ಎಸ್‌ಓಎಸ್ ಲೋಕಾರ್ಪಣೆಗೊಳಿಸಲಾಗಿದೆ ಎಂದು ರಾಜ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ, ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.

ಅವರು ಗುರುವಾರ ಗದಗ ನಗರದ ಮುಳಗುಂದ ನಾಕಾದಲ್ಲಿ ಪ್ರ.ಪ್ರ ಕಾರ್ಯಕ್ರಮದ 6ನೇ ಎಸ್‌ಓಎಸ್ ಲೋಕಾರ್ಪಣೆಗೊಳಿಸಿ ಮಾಧ್ಯಮದವರೊಂದಿಗೆ ಮಾತನಾಡಿದರು.

ಗದಗ ನಗರದಲ್ಲಿ ಈ ಕಲ್ಪನೆ ದೇಶದಲ್ಲಿಯೇ ಮೊದಲ ಬಾರಿಗೆ ನಡೆಯುತ್ತಿದೆ. ಹಿಂದಿನ ಅರಸರ ಕಾಲದಲ್ಲಿ ನಾಗರಿಕರಿಗೆ ತೊಂದರೆ ಆದಾಗ ನ್ಯಾಯದ ಘಂಟೆಯನ್ನು ಬಾರಿಸಬೇಕಾಗಿತ್ತು. ಆದರೆ, ಈಗ ಕಾಲ ಬದಲಾಗಿದ್ದು, ತಂತ್ರಜ್ಞಾನಕ್ಕೆ ತಕ್ಕಂತೆ ಬಟನ್ ಒತ್ತುವ ಮೂಲಕ ಸಮಸ್ಯೆ ಬಗೆಹರಿಸಿಕೊಳ್ಳಬಹುದು. ಬಟನ್ ಒತ್ತಿದಾಕ್ಷಣ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿಯಲ್ಲಿರುವ ಕಮಾಂಡ್ ಸೆಂಟರ್‌ನವರು ಮಾಹಿತಿ ಪಡೆಯುತ್ತಾರೆ. ಜನರ ದೂರು ಆಲಿಸಿ ತಕ್ಷಣ ಸಂಬಂಧಿಸಿದವರಿಗೆ

▸▸3ನೇ ಪುಟಕ್ಕೆ

ಸಾಮಾನ್ಯರು ಅಂಜಿಕೆ, ಭಯ ಇಲ್ಲದೆ ನಿರ್ಭಯವಾಗಿ, ನಿಸ್ಸಂದೇಹದಿಂದ ದೂರು ನೀಡುವ ವಿನೂತನ ವ್ಯವಸ್ಥೆ ಇದಾಗಿದ್ದು, ಇದರಿಂದ ಆಡಳಿತ ವ್ಯವಸ್ಥೆ ಚುರುಕುಗೊಳ್ಳುತ್ತದೆ. ದೂರು ನೀಡಿದ ಬಗ್ಗೆ ಸಂಪೂರ್ಣ ಮಾಹಿತಿ ಲಭ್ಯವಾಗುತ್ತದೆ. ಸಾರ್ವಜನಿಕರು ಯಾವುದೇ ಭಯವಿಲ್ಲದೆ ಡಿಸಿ, ಎಸ್ಪಿ, ಸಿಇಓ ಸೇರಿದಂತೆ ಎಲ್ಲ ಇಲಾಖೆಯ ಅಧಿಕಾರಿಗಳಿಗೆ ದೂರು ಸಲ್ಲಿಸಬಹುದು.

**– ಎಚ್.ಕೆ. ಪಾಟೀಲ.**
ಜಿಲ್ಲಾ ಉಸ್ತುವಾರಿ ಸಚಿವರು.

ಮಹಿಳೆಯರು ಮತ್ತು ಮಕ್ಕಳ ಸುರಕ್ಷತೆ, ಹಿರಿಯ ನಾಗರಿಕರ ರಕ್ಷಣೆ, ಅಕ್ರಮ ಮದ್ಯ ಮಾರಾಟ, ರಸ್ತೆ ಸುರಕ್ಷತಾ ಕ್ರಮ, ಸಮಾಜ ದ್ರೋಹಿ ಚಟುವಟಿಕೆ, ಅನುಮಾನಾಸ್ಪದ ವಸ್ತುಗಳು, ಜಮೀನು ಹಕ್ಕುಗಳ ಪ್ರಕರಣ, ಪಿಂಚಣಿ ಸಂಬಂಧಿಸಿದ ಪ್ರಕರಣ, ಪಂಚಾಯ್ತಿ ಸೇವೆಗೆ ಸಂಬಂಧಿಸಿ ಸಾರ್ವಜನಿಕರು ಪ್ರ.ಪ್ರ ಮೂಲಕ ದೂರು ಸಲ್ಲಿಸಬಹುದಾಗಿದೆ.

# ಅಟಲ್‌ಜೀ ದೇಶ ಕಂಡ ಶ್ರೇಷ್ಠ ಪ್ರಧಾನಿ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಭವ್ಯ ಭಾರತದ ಬೆಳವಣಿಗೆಗೆ ಭರವಸೆಯ ಬೆಳಕಾಗಿ ನಿಂತವರು ಅಜಾತಶತ್ರು ಅಟಲ್‌ಜೀ. ದೇಶ ಕಂಡ ಶ್ರೇಷ್ಠ ಪ್ರಧಾನಿಗಳ ಪಟ್ಟಿಯಲ್ಲಿ ಅಟಲ್‌ಜೀ ಅವರಿಗೆ ವಿಶೇಷ ಸ್ಥಾನಮಾನವಿದೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಶಿರಹಟ್ಟಿ ಬಿಜೆಪಿ ಮಂಡಳದಿಂದ ಪಟ್ಟಣದ ಬಾಲಾಜಿ ಆಸ್ಪತ್ರೆಯಲ್ಲಿ ಮಾಜಿ ಪ್ರಧಾನಿ ದಿ. ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮ ಶತಮಾನೋತ್ಸವದ ಪ್ರಯುಕ್ತ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು.

ದೇಶ ಕಂಡ ಮಹಾನ್ ಮುತ್ಸದ್ದಿಗಳಲ್ಲಿ ಒಬ್ಬರಾಗಿದ್ದ ವಾಜಪೇಯಿ ಅವರು ಅನೇಕ ಜನಪರ ಯೋಜನೆಗಳ ಮೂಲಕ ವಿಕಸಿತ ಭಾರತಕ್ಕೆ ಅಡಿಪಾಯ ಹಾಕಿದ್ದರು. ಅಜಾತ ಶತ್ರು ಆಗಿದ್ದ ಅವರನ್ನು ವಿರೋಧ ಪಕ್ಷದವರೂ ಗೌರವದಿಂದ ಕಾಣುತ್ತಿದ್ದರು. ಇಂದಿನ ಯುವ ನಾಯಕರು ಅವರ ತತ್ವ ಸಿದ್ಧಾಂತ, ವಿಚಾರಧಾರೆಗಳನ್ನು ಮೈಗೂಡಿಸಿಕೊಂಡು ನಡೆಯಬೇಕು ಎಂದು ಹೇಳಿದರು.

ಈ ವೇಳೆ ಶಿರಹಟ್ಟಿ ಮಂಡಲದ ಬಿಜೆಪಿ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ, ತಾಲೂಕಾ ಪ್ರ. ಕಾರ್ಯದರ್ಶಿ ಅನಿಲ ಮುಳುಗುಂದ, ಟಿಎಪಿಸಿಎಂಸಿ ಅಧ್ಯಕ್ಷ ಸೋಮೇಶ ಉಪನಾಳ, ನಿಂಗಪ್ಪ ಬನ್ನಿ, ತಿಮ್ಮರಡ್ಡಿ ಮರಡ್ಡಿ, ಅಶ್ವಿನಿ ಅಂಕಲಕೋಟಿ, ಬಾಬಣ್ಣ ವೇರ್ಣೇಕರ, ಅಶೋಕ ಶಿರಹಟ್ಟಿ, ಪರಶುರಾಮ ಇಮ್ಮಡಿ, ಗಂಗಾಧರ ಮೆಣಸಿನಕಾಯಿ, ಪ್ರವೀಣ ಬೋಮಲೆ, ನವೀನ ಹಿರೇಮಠ, ವಿಜಯ ಕುಂಬಾರ, ವಿಜಯ ಮೆಕ್ಕಿ, ವಾಸು ಪಾಟೀಲ್, ರಾಮು ಪೂಜಾರ, ಕಲ್ಲಪ್ಪ ಹಡಪದ, ಥಾವರಪ್ಪ ಲಮಾಣಿ, ರಾಜಶೇಖರ ಶಿಗ್ಲಿಮಠ, ರಮೇಶ ಹಾಳದೋಟದ, ದುಂಡೇಶ ಕೋಟಗಿ ಸೇರಿದಂತೆ ಬಿಜೆಪಿ ಕಾರ್ಯಕರ್ತರು ಇದ್ದರು.

# ಅಟಲ್ ಬಿಹಾರಿ ವಾಜಪೇಯಿ ಬದಲಾವಣೆಯ ಹರಿಕಾರ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಶಿಗ್ಲಿ ಗ್ರಾಮದಲ್ಲಿ ಬಿಜೆಪಿ ಕಾರ್ಯಕರ್ತರು ಗುರುವಾರ ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ 101ನೇ ಜನ್ಮದಿನದ ಅಂಗವಾಗಿ ಗ್ರಾಮದ ಶಂಕರಲಿಂಗ ದೇವಸ್ಥಾನದಲ್ಲಿ ವಿಶೇಷ ಪೂಜೆ ಹಮ್ಮಿಕೊಂಡಿದ್ದರು.

ನಂತರ ಅಟಲ್‌ಜೀ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಬಡ ಮಕ್ಕಳಿಗೆ ನೋಟ್‌ಬುಕ್ ವಿತರಿಸಿ ಮಾತನಾಡಿದ ಬಿಜೆಪಿ ಹಿರಿಯ ನಾಯಕ ಸೋಮಣ್ಣ ಡಾಣಗಲ್ಲ, ಅಟಲ್ ಬಿಹಾರಿ ವಾಜಪೇಯಿ ಅವರು ದೇಶದ ಬದಲಾವಣೆಗೆ ಕಾರಣರಾಗಿದ್ದಾರೆ. ಅವರು ಸಾಹಿತಿಗಳೂ ಆಗಿದ್ದರು. ಪ್ರಧಾನಮಂತ್ರಿಯಾದ ಸಂದರ್ಭದಲ್ಲಿ ಅವರು ಪ್ರಧಾನಮಂತ್ರಿ ಸಡಕ್ ಯೋಜನೆ, ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆ ಹೀಗೆ ಹತ್ತಾರು ಯೋಜನೆಗಳನ್ನು ಅನುಷ್ಠಾನಕ್ಕೆ ತರುವ ಮೂಲಕ ದೇಶವನ್ನು ಅಭಿವೃದ್ಧಿಗೊಳಿಸಿದ್ದನ್ನು ಭಾರತೀಯರು ಎಂದೂ ಮರೆಯುವುದಿಲ್ಲ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಡಿ.ವೈ. ಹುನಗುಂದ, ಕೃಷ್ಣ ಬಿದರಳ್ಳಿ, ಆನಂದ ತವರಿ, ನಿಂಗಪ್ಪ ದಾನಪ್ಪನವರ, ವೀರಣ್ಣ ಅಕ್ಕೂರ, ಶಂಭು ಹುನಗುಂದ, ಶಿವಾನಂದ ತಳವಾರ, ಗಿಡ್ಡಯ್ಯ ನಾವಿ, ಕೃಷ್ಣ ದಾಮೋದರ, ಶಂಕರ ಮಾಳಗಿ, ಸಿದ್ದು ಪೂಜಾರ, ಮಂಜು ಬದಿ, ಸುನೀಲ್ ತೋಟದ, ಮಂಜುನಾಥ ದೇಸಾಯಿ, ಈರಣ್ಣ ಪುಟ್ಟಪ್ಪನವರ, ಎಂ.ಟಿ. ಬಡಿಗೇರ, ಮುನ್ನಾ ಶಿರಬಡಗಿ ಇದ್ದರು.

### ಗಾಂಧೀಜಿ, ಡಾ. ಅಂಬೇಡ್ಕರ್ ಭಾವಚಿತ್ರಗಳಿಗೆ ಅವಮಾನ ಮಾಡಿದವರ ಮೇಲೆ ತಕ್ಷಣ ಕ್ರಮ ಕೈಗೊಳ್ಳಲು ಡಿಎಸ್‌ಎಸ್ ಆಗ್ರಹ

# ಕ್ರಮ ಕೈಗೊಳ್ಳದೇ ಅಧಿಕಾರಿಗಳಿಂದ ಕಾಲಹರಣ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಶಿಗ್ಲಿ ನಾಕಾದಲ್ಲಿ ಕಳೆದ ತಿಂಗಳು ಗೋವಿನಜೋಳ ಬೆಂಬಲ ಬೆಲೆ ಖರೀದಿ ಕೇಂದ್ರ ಆರಂಭಿಸುವಂತೆ ಆಗ್ರಹಿಸಿ ಸಮಗ್ರ ರೈತ ಸಂಘಟನೆಗಳು ಸುಮಾರು 18 ದಿನಗಳ ಕಾಲ ಹೋರಾಟ ನಡೆಸಿ ಖರೀದಿ ಕೇಂದ್ರ ಪ್ರಾರಂಭಿಸುವಂತೆ ಮಾಡುವಲ್ಲಿ ಸಫಲವಾಗಿತ್ತು. ಇದರಿಂದ ಎಲ್ಲ ರೈತರಿಗೂ ಅನುಕೂಲವಾಗಿದ್ದು, ಹೋರಾಟಗಾರರಿಗೆ ಧನ್ಯವಾದಗಳನ್ನು ಅರ್ಪಿಸುತ್ತೇವೆ. ಆದರೆ, ಇದೇ ಹೋರಾಟದ ವೇದಿಕೆಯಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಮತ್ತು ಮಹಾತ್ಮ ಗಾಂಧೀಜಿಯವರ ಭಾವಚಿತ್ರಗಳಿಗೆ ಅವಮಾನ ಮಾಡಿರುವುದನ್ನು ಡಿಎಸ್‌ಎಸ್ ಉಗ್ರವಾಗಿ ಖಂಡಿಸುತ್ತದೆ ಎಂದು ಮುಖಂಡರಾದ ಸುರೇಶ ನಂದೆಣ್ಣವರ, ತಾ.ಪಂ ಮಾಜಿ ಸದಸ್ಯ ಕೊಟ್ರೆಪ್ಪ ವರ್ದಿ, ಗ್ರಾ.ಪಂ ಮಾಜಿ ಅಧ್ಯಕ್ಷ ಫಕ್ಕೀರೇಶ ಮ್ಯಾಟಣ್ಣವರ ತಿಳಿಸಿದರು.



ಅವರು ಗುರುವಾರ ಪತ್ರಿಕಾ ಕಾರ್ಯಾಲಯದಲ್ಲಿ ಕರೆಯಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಆದರೆ ಹೋರಾಟ ವೇದಿಕೆಯಲ್ಲಿ ಗಾಂಧೀಜಿ ಮತ್ತು ಅಂಬೇಡ್ಕರ್ ಭಾವಚಿತ್ರಗಳನ್ನು ಅತಿಥಿಗಳು ಕೂಡುವ ಆಸನಗಳ ಹಿಂದೆ ಇಟ್ಟಿರುವದು ಅವಮಾನದ ಸಂಗತಿಯಾಗಿದೆ. ಅಲ್ಲದೆ ವೇದಿಕೆಯಲ್ಲಿಯೇ ಮಹನೀಯರ ಭಾವಚಿತ್ರಕ್ಕೆ ಕುರ್ಚಿಯ ಮೇಲೆ ಕಾಲು ತೋರಿಸುತ್ತಾ ಕುಳಿತುಕೊಂಡಿದ್ದ ಜ್ಞಾನೋಬಾ ಬೋಮಲೆ ಮತ್ತು ಸಂಘಟಕರ ಮುಖ್ಯಸ್ಥ ಮಂಜುನಾಥ ಮಾಗಡಿ ಹಾಗೂ ಮತ್ತಿತರರ ಮೇಲೆ ದಲಿತ ಸಂಘಟನೆಗಳು ದೂರು ದಾಖಲಿಸಿದ್ದು, ಇಲ್ಲಿಯವರೆಗೂ ಯಾವುದೇ ಕ್ರಮಗಳಾಗಿಲ್ಲ ಎಂದು ಆರೋಪಿಸಿದರು. ಘಟನೆಗೆ ಸಂಬಂಧಿಸಿದಂತೆ ದೂರು ದಾಖಲಿಸಿರುವವರ ಮೇಲೆ ಕಾನೂನು ಕ್ರಮ ಜರುಗಿಸುವಂತೆ ನವೆಂಬರ್ 7ರಂದು ಅಸ್ಪೃಶ್ಯತಾ ಕಾಯ್ದೆ ಅನುಸಾರ ಕ್ರಮ ಜರುಗಿಸುವಂತೆ ಒತ್ತಾಯಿಸಲಾಗಿತ್ತು. ಪೊಲೀಸರು ಕೇವಲ ಎಫ್‌ಐಆರ್ ದಾಖಲಿಸಿಕೊಂಡಿದ್ದು, ಇದುವರೆಗೂ ಅವರನ್ನು ಬಂಧಿಸುವದಾಗಲಿ, ಕಾನೂನು ಕ್ರಮ ಜರುಗಿಸುವದಾಗಲಿ ಮಾಡಿಲ್ಲ. ಈ ಕುರಿತು ಜಿಲ್ಲಾಧಿಕಾರಿಗಳಿಗೂ ಸಹ ದೂರು ಸಲ್ಲಿಸಿದ್ದು ಅಲ್ಲಿಯೂ ಸಹ ಕ್ರಮವಾಗಿಲ್ಲ ಎಂದು ಆರೋಪಿಸಿದ ಅವರು, ಅಧಿಕಾರಿಗಳು ಕಾಲಹರಣ ಮಾಡುತ್ತಿದ್ದಾರೆ. ಇದನ್ನು ಡಿಎಸ್‌ಎಸ್ ಸಹಿಸುವುದಿಲ್ಲ. ಮುಂದಿನ 8 ದಿನದೊಳಗಾಗಿ ಕ್ರಮ ಕೈಗೊಳ್ಳಬೇಕು ಇಲ್ಲದಿದ್ದಲ್ಲಿ ಶಿರಹಟ್ಟಿ, ಮುಂಡರಗಿ, ಲಕ್ಷ್ಮೇಶ್ವರ ತಾಲೂಕಗಳು ಎಲ್ಲ ಗ್ರಾಮ ಪಂಚಾಯಿತಿ ಎದುರಿನಲ್ಲಿ ಯಾವುದೇ ಸೂಚನೆ ನೀಡದೆ ಪ್ರತಿಭಟನೆ ನಡೆಸುತ್ತೇವೆ ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ರಾಮಪ್ಪ ಗಡದವರ, ಫಕ್ಕೀರೇಶ ಭಜಕ್ಕನವರ, ಜಗದೀಶ ಹುಲಿಗೆಮ್ಮನವರ, ಫಕ್ಕಿರೇಶ ನಂದೆಣ್ಣವರ, ರಾಮು ಅಡಗಿಮನಿ, ನಾಗರಾಜ ನಂದೆಣ್ಣವರ ಮುಂತಾದವರು ಹಾಜರಿದ್ದರು.

ಅದೇ ರೀತಿ ಆದರಹಳ್ಳಿಯ ಗವಿಮಠದ ಡಾ. ಕುಮಾರ ಮಹಾರಾಜರು ದಲಿತರು ಅಸ್ಪೃಶ್ಯತಾ ಕಾಯ್ದೆಯನ್ನು ದುರುಪಯೋಗ ಪಡಿಸಿಕೊಳ್ಳುತ್ತಿದ್ದಾರೆ ಎಂದು ಹೇಳಿರುವುದು ಸಂಘಟನೆಗಳಿಗೆ ಬಗೆದ ದ್ರೋಹವಾಗಿದೆ. ಇದೇ ಸ್ವಾಮೀಜಿಯವರು ಎಕೆ 47 ಗನ್ ಖರೀದಿಸಲು ಓಡಾಡುತ್ತಿರುವದು ಯಾಕೆ ಎಂದು ಪ್ರಶ್ನಿಸಿದ ಅವರು, ಸ್ವಾಮಿಗಳನ್ನು ಕೂಡಲೇ ಗಡಿಪಾರು ಮಾಡುವಂತೆ ಪ್ರಮುಖರು ಆಗ್ರಹಿಸಿದರು.

## ಕೋಳಿ ಫಾರ್ಮ್ ಗಬ್ಬು ವಾಸನೆಗೆ ಆಕ್ರೋಶ: ಫಾರ್ಮ್‌ಗೆ ನುಗ್ಗಿ ಕೋಳಿ, ಮೊಟ್ಟೆ ಹೊತ್ತೊಯ್ದ ಸ್ಥಳೀಯರು!



■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಕೋಳಿ ಫಾರ್ಮ್‌ನಿಂದ ಬರುತ್ತಿದ್ದ ಗಬ್ಬು ವಾಸನೆಯಿಂದ ಬೇಸತ್ತ ಗ್ರಾಮಸ್ಥರು ಫಾರ್ಮ್‌ಗೆ ನುಗ್ಗಿ ಕೋಳಿ ಹಾಗೂ ಮೊಟ್ಟೆಗಳನ್ನು ತೆಗೆದುಕೊಂಡು ತೆರಳಿದ ಘಟನೆ ಸಮೀಪದ ಉಣಚಗೇರಿ ಗ್ರಾಮದಲ್ಲಿ ಗುರುವಾರ ಬೆಳಿಗ್ಗೆ ನಡೆದಿದೆ.

ಗ್ರಾಮದ ಮಧ್ಯದಲ್ಲಿರುವ ಕೋಳಿ ಫಾರ್ಮ್‌ನಿಂದ ದಿನನಿತ್ಯ ಬರುತ್ತಿರುವ ದುರ್ವಾಸನೆಯಿಂದ ಜೀವನ ನಡೆಸುವುದು ಅಸಾಧ್ಯವಾಗಿದೆ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ. ಮನೆಯೊಳಗೆ ಇರಲು ಆಗದ ಸ್ಥಿತಿ ನಿರ್ಮಾಣವಾಗಿದ್ದು, ದುರ್ವಾಸನೆಯಿಂದ ಅನೇಕ ಆರೋಗ್ಯ ಸಮಸ್ಯೆಗಳು ಎದುರಾಗುತ್ತಿವೆ ಎಂದು ಗ್ರಾಮಸ್ಥರು ಕಿಡಿಕಾರಿದ್ದಾರೆ.

ಈ ಸಂಬಂಧ ಕೋಳಿ ಫಾರ್ಮ್ ಅನ್ನು ಸ್ಥಳಾಂತರಿಸುವಂತೆ ಗ್ರಾಮಸ್ಥರು ಹಲವು ಬಾರಿ ತಹಸೀಲ್ದಾರ್ ಹಾಗೂ ಪುರಸಭೆಯ ಮುಖ್ಯಾಧಿಕಾರಿಗಳಿಗೆ ಮನವಿ ಸಲ್ಲಿಸಿದ್ದರೂ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಅಧಿಕಾರಿಗಳ ನಿರ್ಲಕ್ಷ್ಯದ ವಿರುದ್ಧ ಅಸಮಾಧಾನಗೊಂಡ ಗ್ರಾಮಸ್ಥರು ಕೋಳಿ ಫಾರ್ಮ್‌ಗೆ ನುಗ್ಗಿ ಅಲ್ಲಿ ಇದ್ದ ಕೋಳಿಗಳು ಮತ್ತು ಮೊಟ್ಟೆಗಳನ್ನು ತೆಗೆದುಕೊಂಡು ತೆರಳಿದ್ದಾರೆ.

**ಖಾನಾಪೂರ ಅಸಮಾಧಾನ:** ಕೋಳಿ ಫಾರ್ಮ್‌ನಿಂದ ಬರುತ್ತಿದ್ದ ಗಬ್ಬು ವಾಸನೆಯಿಂದ ಬೇಸತ್ತ ಗ್ರಾಮಸ್ಥರು ಕೋಳಿ ಹಾಗೂ ಮೊಟ್ಟೆ ತೆಗೆದುಕೊಂಡು ಹೋಗಿದ್ದು ತಪ್ಪು ಎಂದು ಗದಗ ಜಿಲ್ಲಾ ವಿಕಾಸ ವೇದಿಕೆಯ ಅಧ್ಯಕ್ಷ ವಿಶ್ವನಾಥ್ ಖಾನಾಪೂರ ಹೇಳಿದ್ದಾರೆ. ಲಕ್ಷಾಂತರ ರೂ. ಬಂಡವಾಳ ಹಾಕಿ ಕೋಳಿ ಫಾರ್ಮ್ ಮಾಡಿರುವ ಮಾಲೀಕರಿಗೆ ಇದರಿಂದಾಗಿ ಹಾನಿಯಾಗಿದೆ ಎಂದಿದ್ದಾರೆ.

### ಹಾಲಕೆರೆ ಜಾತ್ರಾ ಮಹೋತ್ಸವದ ಕೃಷಿ ವಿಚಾರ ಗೋಷ್ಠಿಯಲ್ಲಿ ವಿಜ್ಞಾನಿ ಬಸವರಾಜ ಏಣಗಿ ಉಪನ್ಯಾಸ

# ರೈತರು ವಿಜ್ಞಾನಿಯಂತೆ ವಿಚಾರ ಮಾಡಿ




■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕೃಷಿ ಮಾಡುವವರು ಪುಣ್ಯವಂತರು. ಕೃಷಿಕತನ ಭಗವಂತನು ಕೊಟ್ಟ ದೊಡ್ಡ ವರ. ಕೃಷಿಯಲ್ಲಿ ಖುಷಿ ಇದ್ದಾನೆ. ಆದ್ದರಿಂದ ಕೃಷಿಕರೆಲ್ಲರೂ ಖುಷಿಯಿಂದ ಕೃಷಿಯಲ್ಲಿ ತೊಡಗಿಸಿಕೊಳ್ಳಿ ಎಂದು ಕೃಷಿ ವಿಜ್ಞಾನಿ ಬಸವರಾಜ ಏಣಗಿ ಹೇಳಿದರು.

ಹಾಲಕೆರೆ ಗ್ರಾಮದ ಶ್ರೀ ಅನ್ನದಾನೇಶ್ವರ ಶಿವಯೋಗಿಗಳವರ 175ನೇ ಜಾತ್ರಾ ಮಹೋತ್ಸವದ ಕೃಷಿ ವಿಚಾರ ಗೋಷ್ಠಿಯಲ್ಲಿ ಅವರು ನಿಖರ ಮತ್ತು ಸುಸ್ಥಿರ ಕೃಷಿಯ ಬಗ್ಗೆ ವಿಶೇಷ ಉಪನ್ಯಾಸ ನೀಡಿದರು.

ಹೊಲದೊಳಗೆ ಬದುವು ಇದ್ದರೆ ರೈತನ ಬದುಕು ಚೆಂದವಾಗುತ್ತದೆ. ಭೂಮಿಗೆ ನೀರುಣಿಸುವ, ಹರಿಯುವ ನೀರನ್ನು ತಡೆಯುವ ಕಾರ್ಯವನ್ನು ಮಾಡುವ ಬದುವು ರೈತನ ಮಿತ್ರನೇ ಆಗಿದೆ. ಇದರೊಂದಿಗೆ ಮಣ್ಣು ಕೊರೆತ ಉಂಟಾಗದೆ ಇರಲು ಬದುವಿನ ಮೇಲೆ ಗಿಡಮರಗಳಿದ್ದರೆ ಒಳ್ಳೆಯದು. ಜಮೀನಿನಲ್ಲಿ ಕೃಷಿ ಹೊಂಡ ಇದ್ದರೆ ಅದು ನಿಖರ ಕೃಷಿಗೆ ಸಹಾಯ ಮಾಡುತ್ತದೆ. ನಮ್ಮ ಜಮೀನು ಯಾವ ತರಹದ ಬೆಳಗೆ ಯೋಗ್ಯವಾಗಿದೆ ಎಂಬುದನ್ನು ಸರಿಯಾಗಿ ನಿರ್ಧರಿಸಿ ಆ ಪ್ರಕಾರ ಕೃಷಿ ಮಾಡುವ ವಿಧಾನವನ್ನು ನಿಖರ ಕೃಷಿ ಎನ್ನುತ್ತೇವೆ. ನಿಖರ ಕೃಷಿಯಿಂದ ಸುಸ್ಥಿರತೆಯನ್ನು ಕಾಯ್ದುಕೊಳ್ಳಲು ಸಾಧ್ಯವಿದೆ ಎಂದು ಅಭಿಪ್ರಾಯಪಟ್ಟರು.

ಎಲ್ಲ ಬೆಳೆಗಳಲ್ಲಿ ನಿಖರ ಕೃಷಿ ಸಾಧ್ಯವಿಲ್ಲ. ಕೃಷಿಯಲ್ಲಿ ಈಗ ಆಧುನಿಕ ತಂತ್ರಜ್ಞಾನಗಳ ಬಳಕೆ ಆಗುತ್ತಿದೆ. ಹೆಚ್ಚಾಗಿ ಬಳಸುವ ರಾಸಾಯನಿಕ ಗೊಬ್ಬರಗಳಿಂದ ಭೂಮಿಯ ಫಲವತ್ತತೆ ನಾಶವಾಗಿ ಬಂಜರು ಭೂಮಿಯಾಗುತ್ತಿದೆ. ಭೂಮಿಗೆ ಎಂದಿಗೂ ಸೆಗಣಿ ಗೊಬ್ಬರವನ್ನೇ ಉಣಿಸಬೇಕು. ಇದರಿಂದ ಬೆಳೆಗಳಿಗೆ ಸಿಡಿ ಹಾಯುವುದಿಲ್ಲ. ರೈತರಾದವರು ವಿಜ್ಞಾನಿಯಂತೆ ವಿಚಾರ ಮಾಡಿ ವ್ಯಾಪಾರಿಯಂತೆ ವ್ಯವಹಾರ ಮಾಡಿದಾಗ ಮಾತ್ರ ಯಶಸ್ವಿ ರೈತರಾಗಲು ಸಾಧ್ಯ ಎಂದು ಹೇಳಿದರು.

ಈ ವೇಳೆ ಸಂಸ್ಥೆಯ ಹಿಂದಿನ ಆಡಳಿತಾಧಿಕಾರಿ ಎಸ್.ಜಿ. ಹಿರೇಮಠ, ಧರ್ಮ ರತ್ನಾಕರ ಪ್ರಶಸ್ತಿ ಪುರಸ್ಕೃತ ಡಾ. ಜಿ.ಕೆ. ಕಾಳೆ, ಗದಗ ಜಿಲ್ಲಾ ಕಾನಿಪ ಸಂಘದ ಉಪಾಧ್ಯಕ್ಷ ಪ್ರಭುಸ್ವಾಮಿ ಅರವಟಗಿಮಠ, ಕಾರ್ಯಕಾರಿಣಿ ಸದಸ್ಯರಾದ ಆದರ್ಶ ಕುಲಕರ್ಣಿ, ನಿಂಗರಾಜ ಬೇವಿನಕಟ್ಟಿ, ಮಲ್ಲಯ್ಯ ಗುರುಬಸಪ್ಪನಮಠ ಸೇರಿದಂತೆ ದಾನಿಗಳನ್ನು ಶ್ರೀಗಳು ಸನ್ಮಾನಿಸಿದರು.

ವೇದಿಕೆಯ ಮೇಲೆ ಹರ-ಗುರು-ಚರ ಮೂರ್ತಿಗಳು, ಮುಖಂಡ ಸಿದ್ದಣ್ಣ ಬಂಡಿ ಉಪಸ್ಥಿತರಿದ್ದರು. ಡಾ. ಕಲ್ಲಯ್ಯ ಹಿರೇಮಠ ಸ್ವಾಗತಿಸಿದರು. ಶಿಕ್ಷಕ ಎಂ.ಎಂ. ಗುಗ್ಗರಿ, ಕುಮಾರ ಹರ್ಲಾಪೂರ ನಿರೂಪಿಸಿದರು. ಎಫ್.ಎನ್. ಹುಡೇದ ವಂದಿಸಿದರು.

ಸಾನ್ನಿಧ್ಯ ವಹಿಸಿದ್ದ ಮುಪ್ಪಿನ ಬಸವಲಿಂಗ ಸ್ವಾಮೀಜಿ ಆಶೀರ್ವಚನ ನೀಡಿ, ಏಣಗಿಯವರು ಕೃಷಿಯ ಬಗ್ಗೆ ನೀಡಿದ ಉಪನ್ಯಾಸದಲ್ಲಿ ಬಹಳಷ್ಟು ಉತ್ತಮ ಅಂಶಗಳಿವೆ. ಇವುಗಳನ್ನು ಅರಿತುಕೊಂಡು ನಾವು ಕೃಷಿಗೆ ಮುಂದಾದರೆ ನಮಗೆ ಯಶಸ್ಸು ಕಟ್ಟಿಟ್ಟ ಬುತ್ತಿ. ಅಲ್ಲಮಪ್ರಭು ಸಂಪ್ರದಾಯದ ಮಠವಾಗಿರುವ ಹಾಲಕೆರೆ ಮಠಕ್ಕೆ ಆರುನೂರು ವರ್ಷಗಳ ಇತಿಹಾಸವಿದೆ. ಇಲ್ಲಿನ ಗುರು ಪರಂಪರೆ ವಿಶಿಷ್ಟವಾಗಿದ್ದು, ಅನೇಕ ರೀತಿಯ ಕ್ರಾಂತಿಗಳನ್ನು ಮಾಡುವುದರಲ್ಲಿ ಶ್ರೀಮಠ ಪ್ರಸಿದ್ಧವಾಗಿದೆ. ಜಾತ್ರಾಮಹೋತ್ಸವಕ್ಕೆ ಶ್ರಮಿಸಿದ ಎಲ್ಲರಿಗೂ ಅಭಿನಂದನೆಗಳು ಎಂದರು.

### ಜ. 16ರಿಂದ 26ರವರೆಗೆ ಶ್ರೀ ಚಿಕೇನಕೊಪ್ಪದ ಶರಣರ ಪುಣ್ಯಸ್ಮರಣೋತ್ಸವ

# ಜಾತ್ರಾ ಮಹೋತ್ಸವದ ಪೂರ್ವಭಾವಿ ಸಭೆ



■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಸುಕ್ಷೇತ್ರ ಬಳಗಾನೂರ ಗ್ರಾಮದಲ್ಲಿ ಘನಮೌನಿ, ತ್ರಿಕಾಲ ಜ್ಞಾನಿ, ಮೌನತಪಸ್ವಿ ಚಿಕೇನಕೊಪ್ಪದ ಶ್ರೀಚನ್ನವೀರ ಶರಣರ 31ನೇ ಪುಣ್ಯಸ್ಮರಣೋತ್ಸವ, ಜಾತ್ರಾ ಮಹೋತ್ಸವ, ಸಾಮೂಹಿಕ ವಿವಾಹ, ಧಾರ್ಮಿಕ ಸಮಾರಂಭ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಜರುಗಿಸಲು ಸುಕ್ಷೇತ್ರ ಬಳಗಾನೂರಿನ ಪರಮಪೂಜ್ಯ ಶ್ರೀ ಶಿವಶಾಂತವೀರ ಶರಣರ ಸಾನ್ನಿಧ್ಯದಲ್ಲಿ ಶ್ರೀಮಠದಲ್ಲಿ ಜರುಗಿದ ಪೂರ್ವಭಾವಿ ಸಭೆಯಲ್ಲಿ ಭಕ್ತರು, ಶರಣರ ಬಳಗದ ಹಿರಿಯರು ನಿರ್ಣಯಿಸಿದರು.

ಸಭೆಯ ಸಾನ್ನಿಧ್ಯ ವಹಿಸಿದ್ದ ಪೂಜ್ಯಶ್ರೀ ಶಿವಶಾಂತವೀರ ಶರಣರು ಮಾತನಾಡಿ, ನದಿಯ ನೀರು ನದಿಗಲ್ಲ, ವೃಕ್ಷದ ಫಲ ವೃಕ್ಷಕ್ಕಲ್ಲ, ಶರಣರ ಬದುಕು ಶರಣರಿಗಲ್ಲ. ಅದು ಲೋಕದ ಹಿತಕ್ಕೆ. ಹಾಗೆಯೇ, ಚಿಕೇನಕೊಪ್ಪದ ಚನ್ನವೀರ ಶರಣರು, ಸಜ್ಜಲಗುಡ್ಡದ ಶರಣಮ್ಮ, ನಾಲತ್ವಾಡದ ವೀರೇಶ್ವರ ಶರಣರು ಸೇರಿದಂತೆ ನಾಡಿನ ಶರಣರು ಲೋಕದ ಹಿತಕ್ಕಾಗಿ ತಮ್ಮ ಜೀವನವನ್ನು ಸಮರ್ಪಿಸಿದ್ದಾರೆ. ನಾಡಿಗೆ ಶರಣರ-ಸಂತರ ಪರೋಪಕಾರ ಜೀವನ ಆದರ್ಶವಾಗಿದೆ. ಇವರೆಗೆ ಬಳಗಾನೂರಿನಲ್ಲಿ ಅದ್ಧೂರಿಯಾಗಿ ನಡೆದಿರುವ ಗುರುಗಳ ಪುಣ್ಯಸ್ಮರಣೋತ್ಸವ ಹಾಗೂ ಜಾತ್ರಾ ಮಹೋತ್ಸವಕ್ಕೆ ಶ್ರೀಮಠದ ಭಕ್ತರ ಕಾಯಕ ಶಕ್ತಿ ಕಾರಣವಾಗಿದೆ ಎಂದು ಹೇಳಿದರು.

2026ರ ಜನವರಿ 16ರಿಂದ 26ರವರೆಗೆ ಜಾತ್ರಾಮಹೋತ್ಸವದ ಅಂಗವಾಗಿ ನಡೆಯುವ ಪ್ರವಚನ ಹಾಗೂ ಜನವರಿ 25ರಂದು ಬೆಳಿಗ್ಗೆ ನಡೆಯುವ ಸಾಮೂಹಿಕ ವಿವಾಹ ಮಹೋತ್ಸವ ಮತ್ತು ಸಂಜೆ ಜರುಗುವ ಮಹಾರಥೋತ್ಸವವನ್ನು ಯಶಸ್ವಿಗೊಳಿಸುವದಲ್ಲದೆ, ಜ. 16ರಿಂದ 26ರವರೆಗೆ ನಡೆಯುವ ಎಲ್ಲ ಕಾರ್ಯಕ್ರಮಗಳಲ್ಲಿ ಗ್ರಾಮದ, ಸುತ್ತಮುತ್ತಲಿನ ಭಕ್ತರು ದಾಸೋಹ ಕಾರ್ಯ, ಬುಂದೆ ತಯಾರಿಸಲು, ಅಡುಗೆ ತಯಾರಿಸಲು, ಜಾತ್ರಾ ಮಹೋತ್ಸವಕ್ಕೆ ಆಗಮಿಸಿದ ಭಕ್ತರಿಗೆ ಪ್ರಸಾದ ವಿತರಿಸಲು ಹಾಗೂ ಸ್ವಚ್ಛತಾ ಕಾರ್ಯಕ್ಕೆ ಎಲ್ಲರೂ ಕೈಜೋಡಿಸೋಣ ಎಂದು ತೀರ್ಮಾನಿಸಿ, ಶ್ರೀಮಠದ ಭಕ್ತರು ತನು-ಮನ-ಧನದಿಂದ ಸೇವೆ ಸಲ್ಲಿಸುವ ಮೂಲಕ ಗುರುವಿನ ಕೃಪೆಗೆ ಪಾತ್ರರಾಗೋಣ ಎಂದು ಹೇಳಿದರು.

ಸಭೆಯಲ್ಲಿ ಬಳಗಾನೂರ ಸುತ್ತಮುತ್ತಲಿನ ಗ್ರಾಮಗಳಿಂದ ಆಗಮಿಸಿದ ನೂರಾರು ಶರಣ ಬಳಗದವರು ಉಪಸ್ಥಿತರಿದ್ದು ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿದರು.

# ಸಕಲರ ಹಿತ ಬಯಸುವುದೇ ಮಾನವ ಧರ್ಮ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಾನವರ ಕಲ್ಯಾಣವನ್ನು ತನ್ನ ಜೀವನದ ಗುರಿಯಾಗಿಸಿಕೊಂಡು ಜಗತ್ತಿನ ಎಲ್ಲ ಜೀವರಾಶಿಗಳು ನೆಮ್ಮದಿಯಿಂದ ಜೀವನ ಸಾಗಿಸಬೇಕು ಎಂಬ ಸಂದೇಶ ಸಾರಿದ ಏಕೈಕ ವ್ಯಕ್ತಿ ಏಸು ಕ್ರಿಸ್ತರಾಗಿದ್ದಾರೆ ಎಂದು ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ ಹೇಳಿದರು.

ಅವರು ಪಟ್ಟಣದ ಮುಕ್ತಿನಗರದಲ್ಲಿರುವ ಬ್ಲೆಸಿಂಗ್ ಗಾಸ್ಪೆಲ್ ಪ್ರೇಯರ್ ಚರ್ಚ್‌ನಲ್ಲಿ ಗುರುವಾರ ಕ್ರಿಸ್‌ಮಸ್ ಅಂಗವಾಗಿ ಏಸು ಕ್ರಿಸ್ತನ ಜನ್ಮದಿನವನ್ನು ಕೇಕ್ ಕತ್ತರಿಸಿ ಶುಭಕೋರಿ ಮಾತನಾಡಿದರು.

ಜಗತ್ತಿನಲ್ಲಿ ವಾಸ ಮಾಡುತ್ತಿರುವ ಸಕಲ ಜೀವರಾಶಿಗಳಿಗೆ ಲೇಸನ್ನು ಬಯಸುವುದೇ ನಿಜವಾದ ಧರ್ಮ. ದೇವನೊಬ್ಬ ನಾಮ ಹಲವು ಎನ್ನುವಂತೆ ಏಸುಕ್ರಿಸ್ತ ಕೂಡಾ ದೇವರ ಅವತಾರವಾಗಿದ್ದಾರೆ. ನೊಂದ, ಎಲ್ಲರಿಂದ ನಿರ್ಲಕ್ಷಿಸಲ್ಪಟ್ಟ, ರೋಗರುಜಿನಗಳಿಗೆ ಒಳಗಾಗಿರುವ ಎಲ್ಲರನ್ನು ನನ್ನ ಭಕ್ತರು ಎಂದು ಏಸುಕ್ರಿಸ್ತರು ಹೇಳಿದ್ದರು. ಅವರು ಸಮಾಜಕ್ಕೆ ಕೊಟ್ಟ ಸಂದೇಶಗಳು ಶ್ರೇಷ್ಠವಾಗಿದ್ದು, ಎಲ್ಲರೂ ನನ್ನವರೆಂಬ ಭಾವ ಬೆಳೆಸಿಕೊಳ್ಳುವಂತೆ ಅವರು ಉತ್ತಮ ಸಂದೇಶ ಸಾರಿದ್ದರು ಎಂದು ಹೇಳಿದರು.

ಚರ್ಚ್‌ನ ಫಾದರ್ ರೆ. ಜಿ.ಎಂ.ನಾಯಕ್ ಮಾತನಾಡಿ, ಏಸುಕ್ರಿಸ್ತನ ಸಂದೇಶಗಳು ಸರ್ವರಿಗೂ ಏಳಿಗೆಯನ್ನು ಬಯಸುವವಾಗಿವೆ. ಬಡವ, ಬಲ್ಲಿದ, ಜಾತಿ, ವಿಜಾತಿ ಯಾವುದನ್ನೂ ನೋಡದೆ ಮನುಷ್ಯನನ್ನಾಗಿ ನೋಡು ಎನ್ನುವ ತತ್ವವನ್ನು ಇಡೀ ಜಗತ್ತಿಗೆ ಏಸುಕ್ರಿಸ್ತರು ತೋರಿಸಿಕೊಟ್ಟಿದ್ದಾರೆ. ಎಲ್ಲ ಧರ್ಮಗಳು ಒಳ್ಳೆಯದನ್ನು ಬಯಸುವಂತೆ ಹೇಳುತ್ತವೆ, ನಮ್ಮ ನೆರಹೊರೆಯ ಪರಸ್ಪರರನ್ನು ಪ್ರೀತಿಸದ ಹೊರತು ಮನುಕುಲದ ಉದ್ಧಾರ ಸಾಧ್ಯವಿಲ್ಲ ಎಂಬುದು ಏಸುಕ್ರಿಸ್ತನ ನುಡಿಯಾಗಿತ್ತು ಎಂದರು.

ಈ ಸಂದರ್ಭದಲ್ಲಿ ಯಶೋಧಾ ನಾಯಕ್, ರಾಮಪ್ಪ ಗಡದವರ, ವಿಜಯ ಕರಡಿ, ಈರಣ್ಣ ಅಂಕಲಕೋಟಿ, ಎಂ.ಕೆ. ಕಳ್ಳಿಮಠ ದಂಪತಿಗಳು, ಡಿ.ಎಂ. ಪೂಜಾರ, ಪ್ರೀತಂ ಮತ್ತು ಪ್ರವೀಣ ಸೇರಿದಂತೆ ಅನೇಕರು ಇದ್ದರು. ವಿವಿಧ ಭಾಗಗಳಿಂದ ನೂರಾರು ಭಕ್ತರು ಪ್ರಾರ್ಥನೆಯಲ್ಲಿ ಪಾಲ್ಗೊಂಡಿದ್ದರು. ನಂತರ ಬಟ್ಟೆ, ಸಿಹಿ ತಿನಿಸು ಇತ್ಯಾದಿಗಳನ್ನು ವಿತರಿಸಲಾಯಿತು.

## ವಾರ್ಷಿಕ ಸ್ನೇಹ ಸಮ್ಮೇಲನ ಡಿ. 31ಕ್ಕೆ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಎಸ್‌ಜೆಜೆಎಂ ಸಂಯುಕ್ತ ಪದವಿಪೂರ್ವ ಮಾಹಾವಿದ್ಯಾಲಯದ 2025/26ನೇ ಸಾಲಿನ ವಾರ್ಷಿಕ ಸ್ನೇಹ ಸಮ್ಮೇಲನ ಡಿ. 31ರಂದು ಬೆಳಿಗ್ಗೆ 10.30ಕ್ಕೆ ಬಾಲಲೀಲಾ ಮಾಹಾಂತ ಶಿವಯೋಗಿ ಕಲಾಭವನದಲ್ಲಿ ಜರುಗುವುದು.

ದಿವ್ಯ ಸಾನ್ನಿಧ್ಯವನ್ನು ಗವಿಮಠದ ಮಲ್ಲಿಕಾರ್ಜುನ ಮಾಹಾಸ್ವಾಮೀಜಿ ವಹಿಸಿಕೊಳ್ಳುವರು. ಅಧ್ಯಕ್ಷತೆಯನ್ನು ಎಂ.ಡಿ. ಬಟ್ಟೂರ ವಹಿಸಲಿದ್ದು, ಮುಖ್ಯ ಅಥಿತಿಗಳಾಗಿ ನರೆಗಲ್ಲ ಎಸ್.ಎ.ಪಿ.ಯು ಕಾಲೇಜಿನ ಉಪನ್ಯಾಸಕ ಎಫ್.ಎನ್. ಹುಡೇದ ಪಾಲ್ಗೊಳ್ಳುವರು. ವಿ.ಎಸ್. ಕಲ್ಯಾಣಮಠ, ಎಚ್.ಎಂ. ಮಜ್ಜಿಗುಡ್ಡ, ಎ.ಎಂ. ಅಂಗಡಿ, ಇ.ಎಂ. ಗುಳೆದಗುಡ್ಡ, ವಿದ್ಯಾರ್ಥಿಗಳ ಪ್ರತಿನಿಧಿಗಳಾದ ಜಿ.ಎಸ್. ಗೌಳಿ, ಟಿ.ಎಂ. ಮಂಟೂರಮುಲ್ಲಾ, ಎನ್.ಎಂ. ನಾದಿಗಟ್ಟಿ, ಮಂಜುಳಾ ಬಳ್ಳಾರಿ ಭಾಗವಹಿಸುವರು.

## ಬ್ರೈಟ್ ಹಾರಿಝೋನ್ ಪ್ರೌಢಶಾಲೆಯ ವಾರ್ಷಿಕ ಸ್ನೇಹ ಸಮ್ಮೇಳನ ಜ.2ಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಕಳಸಾಪೂರ ಬ್ರೈಟ್ ಹಾರಿಝೋನ್ ಪ್ರೌಢಶಾಲೆಯ ವಾರ್ಷಿಕ ಸ್ನೇಹ ಸಮ್ಮೇಳನ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ಜ.2ರಂದು ಸಾಯಂಕಾಲ 4 ಗಂಟೆಗೆ ಜರಗಲಿದೆ.

ದಿವ್ಯ ಸಾನ್ನಿಧ್ಯವನ್ನು ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗ ದೇವರು ವಹಿಸಿಕೊಳ್ಳುವರು. ಅಧ್ಯಕ್ಷೆಯನ್ನು ಬ್ರೈಟ್ ಹಾರಿಝೋನ್ ಪ್ರೌಢಶಾಲೆಯ ಗೌರವಾಧ್ಯಕ್ಷ ಬಿ.ಎಂ. ಪಾಟೀಲ್ ವಹಿಸುವರು. ಮುಖ್ಯ ಅಥಿತಿಗಳಾಗಿ ಗದಗ ಡಿಡಿಪಿಐ ಆರ್.ಎಸ್. ಬುರಡಿ, ಗದಗ ಗ್ರಾಮೀಣ ಬಿಇಓ ವಿ.ವಿ. ನಡುವಿನಮನಿ, ಶಿಕ್ಷಣ ಸಂಸ್ಥೆಯ ಸಲಹೆಗಾರ ಕೆ.ಎಚ್. ಬೇಲೂರ, ಗದಗ ಗ್ರಾಮೀಣ ಸಿಪಿಐ ಸಿದ್ದರಾಮೇಶ ಗಡೇದ, ಜೆ.ಎ. ಭಾವಿಕಟ್ಟಿ, ಎಂ.ಎಚ್. ಸವದತ್ತಿ, ಐ.ಬಿ. ಬೆನಕೊಪ್ಪ, ಆಡಳಿತಾಧಿಕಾರಿ ಬಿ.ಡಿ. ಹರ್ತಿ, ಎಚ್.ಎನ್. ಗದಗ, ಮುಖ್ಯೋಪಾಧ್ಯಾಯ ವಾಯ್. ಎನ್. ಭರಮಗೌಡರ, ಎಸ್. ಎನ್. ಗದಗ, ವಿದ್ಯಾರ್ಥಿಗಳ ಪ್ರತಿನಿಧಿ ಶ್ರೇಯಾ ಮಲ್ಲೂರ, ವೈಷ್ಣವಿ ರಾಠೋಡ, ಗಣೇಶ ಕೆಂಚಣ್ಣವರ, ಹರ್ಷಿತಾ ಅಕ್ಕಮ್ಮನವರ ಭಾಗವಹಿಸುವರು.

## ಗುರುವಂದನೆ, ಸ್ನೇಹ ಸಮ್ಮಿಲನ ಡಿ.28ಕ್ಕೆ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಎಸ್‌ಜೆಜೆಎಂ ಸಂಯುಕ್ತ ಪದವಿಪೂರ್ವ ಮಾಹಾವಿದ್ಯಾಲಯದ 2001-02ನೇ ಸಾಲಿನ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಂದ ಗುರುವಂದನಾ ಹಾಗೂ ಸ್ನೇಹ ಸಮ್ಮಿಲನ ಡಿ. 28ರಂದು ಬೆಳಿಗ್ಗೆ 10.30ಕ್ಕೆ ಬಾಲಲೀಲಾ ಮಾಹಾಂತ ಶಿವಯೋಗಿ ಕಲಾ ಭವನದಲ್ಲಿ ಜರಗುವುದು.

ದಿವ್ಯ ಸಾನ್ನಿಧ್ಯವನ್ನು ಗವಿಮಠದ ಮಲ್ಲಿಕಾರ್ಜು ಮಾಹಾಸ್ವಾಮಿಗಳು ವಹಿಸಿಕೊಳ್ಳುವರು.

ಅಧ್ಯಕ್ಷತೆಯನ್ನು ಎಂ.ಡಿ. ಬಟ್ಟೂರ ವಹಿಸಲಿದ್ದು, ಉದ್ಘಾಟನೆಯನ್ನು ಶಿವಣ್ಣಾ ನೀಲಗುಂದ ನೆರವೇರಿಸುವರು. ಗುರು ಸ್ಮರಣೆ ಕೆ.ಎ. ಬಳಿಗೇರ, ಮುಖ್ಯ ಅಥಿತಿಗಳಾಗಿ ಡಾ. ಎಚ್.ಸಿ. ಚವಡಿ, ವಿ.ಎಸ್. ನೀಲಗುಂದ, ಬಿ.ಸಿ. ಬಡ್ನಿ, ಎನ್.ಆರ್. ದೇಶಪಾಂಡೆ, ಕೆ.ಎಲ್. ಕರಿಗೌಡರ, ಎಂ.ಎಂ. ಬಡ್ನಿ, ಪಿ.ಎ. ವಂಟಕರ, ಎಂ.ಎಂ. ಅದರಗುಂಚಿ, ಎಫ್. ಎಸ್. ಅಮೋಘಿಮಠ, ಎಸ್.ಸಿ. ಕುರ್ತಕೋಟಿ, ಪ್ರಾಚಾರ್ಯ ಎ.ಎಂ. ಅಂಗಡಿ, ಇ.ಎಂ. ಗುಳೆದಗುಡ್ಡ ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

## ಅಟಲ್‌ಜೀ ಸರಳ ಸಜ್ಜನಿಕೆಯ ನಾಯಕ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ದೇಶ ಕಂಡ ಅಪರೂಪದ ರಾಜಕಾರಣಿ ಮಾಜಿ ಪ್ರಧಾನಿ ದಿ. ಅಟಲ್ ಬಿಹಾರಿ ವಾಜಪೇಯಿ ಎಂದು ಗದಗ ಜಿಲ್ಲಾ ಬಿಜೆಪಿ ರೈತ ಮೋರ್ಚಾ ಮಾಜಿ ಅಧ್ಯಕ್ಷ ಬುದ್ದಪ್ಪ ಮಾಡಳಿ ಹೇಳಿದರು.

ಅವರು ಪಟ್ಟಣದಲ್ಲಿ ಮಾಜಿ ಪ್ರಧಾನಿ ದಿ. ಅಟಲ್‌ಜೀ ಅವರ ಜನ್ಮ ದಿನಾಚರಣೆ ಅಂಗವಾಗಿ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಪತ್ರಕರ್ತರನ್ನು ಸನ್ಮಾನಿಸಿ ಮಾತನಾಡಿದರು.

ಸರಳ ಸಜ್ಜನಿಕೆ, ಕಾಯಕ ತತ್ವ ಪರಿಪಾಲಕರಾಗಿ ದೇಶವನ್ನು ಮುನ್ನಡೆಸಿದವರ್ನುಟಲ್‌ಜೀ. ಇಂತವರ ಮಾರ್ಗದರ್ಶನದಲ್ಲಿ ಇಂದಿನ ಪ್ರಧಾನಿ ನರೇಂದ್ರ ಮೋದಿ ಅವರು ಸಾಗುತ್ತಿರುವುದರಿಂದ ದೇಶ ಅಭಿವೃದ್ಧಿ ಪಥದಲ್ಲಿ ಮುನ್ನಡೆಯುತ್ತಿದೆ. ಇಂತಹ ನಾಯಕರ ಹಾದಿಯಲ್ಲಿ ನಾವೆಲ್ಲರೂ ಸಾಗಬೇಕು ಎಂದರು.

ಪತ್ರಿಕಾ ವರದಿಗಾರರಾದ ವಿ.ಡಿ. ಕಣವಿ, ಸಿ.ಕೆ. ಭಜಂತ್ರಿ, ವಿ.ಡಿ. ಸಿದ್ದನಗೌಡರ ಅವರನ್ನು ಸನ್ಮಾನಿಸಲಾಯಿತು. ಅಶೋಕ ಮಜ್ಜಿಗುಡ್ಡ, ಸುಭಾಷ ಕವಲೂರ, ಅಜ್ಜಪ್ಪ ಪಾಯಣ್ಣವರ, ಸಿ.ಬಿ. ದೊಡ್ಡವಾಡ, ದೇವಪ್ಪ ಪೂಜಾರ, ಮುತ್ತಪ್ಪ ಬಳಿಗೇರ, ಪರಪ್ಪ ಕರಿಗಾರ, ಲಕ್ಷ್ಮಣ ಮಾನೇಗಾರ ಮುಂತಾದವರಿದ್ದರು.

### ಪ್ರತಿಭಾ ಕಾರಂಜಿ, ಕಲೋತ್ಸವ ಕಾರ್ಯಕ್ರಮದಲ್ಲಿ ಬಿಇಒ ನಡುವಿನಮನಿ

# ಪೂರ್ವ ಪ್ರಾಥಮಿಕ ಶಾಲೆ ಆರಂಭಕ್ಕೆ ನಿರ್ಧಾರ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಪ್ರಾಥಮಿಕ ಶಾಲೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಿಸುವ ನಿಟ್ಟಿನಲ್ಲಿ ಗದಗ ತಾಲೂಕಿನ 36 ಪ್ರಾಥಮಿಕ ಶಾಲೆಗಳಲ್ಲಿ ಪೂರ್ವ ಪ್ರಾಥಮಿಕ ಶಾಲೆಗಳನ್ನು ಆರಂಭಿಸಲು ಶಿಕ್ಷಣ ಇಲಾಖೆ ನಿರ್ಧರಿಸಿದೆ ಎಂದು ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ ಹೇಳಿದರು.




ಇಲ್ಲಿಯ ಸರಕಾರಿ ಮಾದರಿ ದ್ವಿಭಾಷಾ ಪ್ರಾಥಮಿಕ ಶಾಲೆಯಲ್ಲಿ ಶಾಲಾ ಶಿಕ್ಷಣ ಇಲಾಖೆ, ಕ್ಷೇತ್ರ ಶಿಕ್ಷಣಾಧಿಕಾಗಳು, ಕ್ಷೇತ್ರ ಸಮನ್ವಯಾಧಿಕಾರಿಗಳ ಕಾರ್ಯಾಲಯ ಗದಗ ಗ್ರಾಮೀಣ ಹಾಗೂ ಸಮೂಹ ಸಂಪನ್ಮೂಲ ಕೇಂದ್ರ ಲಕ್ಕುಂಡಿ ಇವುಗಳ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಪ್ರಾಥಮಿಕ ಮತ್ತು ಪ್ರೌಢಶಾಲೆಯ ಲಕ್ಕುಂಡಿ ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಸ್ಪರ್ಧಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಈ ದಿಸೆಯಲ್ಲಿ ಬೇಗನೆ ಪೂರ್ವ ಪ್ರಾಥಮಿಕ ಸರಕಾರಿ ಶಾಲೆ ಆರಂಭವಾದರೆ 1ನೇ ತರಗತಿಗೆ ಅದೇ ಮಕ್ಕಳು ಪ್ರವೇಶ ಪಡೆಯುತ್ತಾರೆ ಎಂಬ ಉದ್ದೇಶದಿಂದ 36 ಕಡೆ ಪೂರ್ವ ಪ್ರಾಥಮಿಕ ಶಾಲೆ ಆರಂಭಿಸುತ್ತಿದ್ದೇವೆ. ಇದಕ್ಕೆ ಗ್ರಾಮ ಪಂಚಾಯಿತಿ, ಎಸ್‌ಡಿಎಂಸಿ, ಗ್ರಾಮಸ್ಥರ ಸಹಕಾರ ಬೇಕು ಎಂದರು.

ಜಿಲ್ಲಾ ಉತ್ತಮ ಶಿಕ್ಷಕ ಪ್ರಶಸ್ತಿ ವಿಜೇತ ಎಸ್.ಎಚ್. ಶೆಟ್ಟಿನಾಯ್ಕರ, ಪಿಡಿಓ ಅಮೀರನಾಯಕ ಮಾತನಾಡಿದರು. ಸಿಆರ್‌ಪಿ ಕೆ.ಟಿ. ಮೀರಾನಾಯಕ ಪ್ರಾಸ್ತಾವಿಕವಾಗಿ ಮಾತನಾಡಿದರು. ಎಸ್‌ಡಿಎಂಸಿ ಅಧ್ಯಕ್ಷ ಗವಿಶಿದ್ದಪ್ಪ ಯಲಿಶಿರುಂಜ ಅಧ್ಯಕ್ಷತೆ ವಹಿಸಿದ್ದರು. ಅಕ್ಷರ ದಾಸೋಹದ ನಿರ್ದೇಶಕ ಶಂಕರ ಹಡಗಲಿ, ಗ್ರಾ.ಪಂ ಸದಸ್ಯರಾದ ಅನಸಮ್ಮ ಅಂಬಕ್ಕಿ, ಕುಬೇರಪ್ಪ ಬೆಂತೂರು, ಅಶೋಕ ಬೂದಿಹಾಳ, ಎನ್.ಎಚ್. ಪಾಟೀಲ, ಎಸ್.ಬಿ. ಹೊರಕೇರಿ, ಪಿ.ಎಂ. ಅಯ್ಯನಗೌಡರ, ರಮಜಾನಸಾಬ ತಹಸೀಲ್ದಾರ, ಪವಿತ್ರಾ ಬಣವಿ, ಎಸ್‌ಡಿಎಂಸಿ ಸದಸ್ಯರು ಉಪಸ್ಥಿತರಿದ್ದರು.


ಪಿ.ಎನ್. ಶಿರೋಳ ಸ್ವಾಗತಿಸಿದರು. ಅಂಜನಾ ಕರಿಯಲ್ಲಪ್ಪನವರ ನಿರೂಪಿಸಿ ವಂದಿಸಿದರು.

ಗ್ರಾ.ಪಂ ಅಧ್ಯಕ್ಷ ಅಧ್ಯಕ್ಷ ಕೆ.ಎಸ್. ಪೂಜಾರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಎಲೆ ಮರೆಯ ಕಾಯಿಯಂತೆ ಮಕ್ಕಳಲ್ಲಿ ಅಡಗಿರುವ ಪ್ರತಿಭೆಯನ್ನು ಹೊರತೆಗೆಯಲು ಈ ವೇದಿಕೆಯು ಸಹಕಾರಿಯಾಗಿದೆ. ಶಿಕ್ಷಕರು ಮಕ್ಕಳಲ್ಲಿಯ ಸುಪ್ತ ಪ್ರತಿಭೆಯನ್ನು ಹೊರತೆಗೆಯಲು ತಮ್ಮಲ್ಲಿಯ ಎಲ್ಲ ಶಿಕ್ಷಣವನ್ನು ಧಾರೆ ಎರೆದು ಅವರ ಭವಿಷ್ಯವನ್ನು ರೂಪಿಸುವಲ್ಲಿ ಶ್ರಮ ವಹಿಸಬೇಕು. ಈ ದಿಸೆಯಲ್ಲಿ ಗ್ರಾಮ ಪಂಚಾಯಿತಿಯು ಶಿಕ್ಷಣ ಅಭಿವೃದ್ಧಿಗೆ ಸದಾ ಪ್ರೋತ್ಸಾಹ ನೀಡುತ್ತಾ ಬರುತ್ತಿದೆ ಎಂದರು.

# ಧಾರವಾಡದಲ್ಲಿ 'ಸವಾಯಿ ಮಲ್ಲಸರ್ಜ' ಪುಸ್ತಕ ಲೋಕಾರ್ಪಣೆ ಇಂದು

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ದೇಸಾಯಿ ಕುಟುಂಬಸ್ಥರಾದ ವಿಜಯಕುಮಾರಸರ್ಜ ಶಿ ದೇಸಾಯಿ ಅವರು ಬರೆದ ಸವಾಯಿ ಮಲ್ಲಸರ್ಜ ಎಂಬ ಗ್ರಂಥದ ಲೋಕಾರ್ಪಣೆ ಸಮಾರಂಭ ಶುಕ್ರವಾರ ದಿ. 26 ರಂದು ಬೆಳಿಗ್ಗೆ 11:00 ಗಂಟೆಗೆ ಧಾರವಾಡದ ಕರ್ನಾಟಕ ವಿದ್ಯಾವರ್ಧಕ ಸಂಘ ದಲ್ಲಿ ಜರುಗಲಿದೆ. ಈ ಕಾರ್ಯಕ್ರಮದ ಸಾನಿಧ್ಯವನ್ನು ಹಾಲಕೆರೆಯ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು ವಹಿಸಲಿದ್ದಾರೆ. ಅಧ್ಯಕ್ಷತೆಯನ್ನು ಮಡಿವಾಳ ರಾಜಯೋಗಿಂದ್ರ ಮಹಾಸ್ವಾಮಿಗಳು ವಹಿಸಲಿದ್ದಾರೆ. ಭೈರನಹಟ್ಟಿಯ ಶಾಂತಲಿಂಗಸ್ವಾಮಿಗಳು, ಇಟಗಿಯ ಪಣ್ಮುಖಪ್ಪಜ್ಜ ಧರ್ಮರ ವಹಿಸಲಿದ್ದಾರೆ.




ಗ್ರಂಥ ಪರಿಚಯವನ್ನು ಡಾ॥ ಸರಜೂ ಕಾಟ್ಕರ್, ವೀರರಾಣಿ ಕಿತ್ತೂರು ಚನ್ನಮ್ಮ ಕೃತಿಯ ಲೇಖಕರು ಮಾಡುತ್ತಾರೆ. ಮುಖ್ಯ ಅತಿಥಿಗಳಾಗಿ ಶ್ರೀಮತಿ ಶಿವಲೀಲಾ ವಿನಯ ಕುಲಕರ್ಣಿ, ಮಾಜಿ ಸಚಿವರಾದ ಕಳಕಪ್ಪ ಬಂಡಿ, ಶಾಸಕರಾದ ಸಿ.ಸಿ.ಪಾಟೀಲ, ಎಮ್.ಆರ್.ಪಾಟೀಲ್ ಹಾಗೂ ಜಿ.ಪಿ.ಪಾಟೀಲ ಆಗಮಿಸಲಿದ್ದಾರೆ.

ವಿಶೇಷ ಆಹ್ವಾನಿತರಾಗಿ ಆಲೂರು ವೆಂಕಟರಾವ ಟ್ರಸ್ಟ್‌ನ ಅಧ್ಯಕ್ಷರಾದ ಡಾ॥ ರಂಜಾನ್ ದರ್ಗಾ, ರವೀಂದ್ರನಾಥ ದೊಡ್ಡಮೇಟಿ, ಸಾಹಿತಿ ಮಹೇಶ ಚನ್ನಂಗಿ ಆಗಮಿಸಲಿದ್ದಾರೆ ಎಂದು ದೇಸಾಯಿ ಕುಟುಂಬಸ್ಥರು (ಇಟಗಿ-ಶಾಂತಗಿರಿ) ಪತ್ರಿಕಾ ಪ್ರಕಟಣೆಯ ಮೂಲಕ ಕೋರಿದ್ದಾರೆ.

---

**ಅಗಡಿ ಸನ್‌ರೈಸ್ ಆಸ್ಪತ್ರೆಯಲ್ಲಿ ಮೂರು ದಿನಗಳ ಪ್ರಕೃತಿ ಚಿಕಿತ್ಸೆ, ಯೋಗ ಶಿಬಿರಕ್ಕೆ ಚಾಲನೆ**

# ಪ್ರಕೃತಿ ಮನುಷ್ಯನ ಜೀವಾಳವಾಗಿದೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪ್ರಕೃತಿ ಚಿಕಿತ್ಸೆ ಎಂಬುದು ಮಾನವನ ದೇಹ, ಮನಸ್ಸು ಮತ್ತು ಆತ್ಮ ಸಮತೋಲನದ ಮೇಲೆ ಆಧಾರಿತವಾದ ನೈಸರ್ಗಿಕ ಚಿಕಿತ್ಸಾ ವಿಧಾನವಾಗಿದೆ. ಇತ್ತೀಚಿನ ದಿನಗಳಲ್ಲಿ ಬಿ.ಪಿ, ಶುಗರ್, ಹೃದಯರೋಗ ಸಾಮಾನ್ಯ ಕಾಯಿಲೆಯಾಗಿದೆ. ಅದರೊಂದಿಗೆ ಮಧುಮೇಹ ಕೂಡ ಸೇರಿಕೊಂಡಿದೆ. ಪಾಸ್ಟ್‌ಫುಡ್, ಬೇಕರಿ ತಿನಿಸುಗಳಿಂದ ದೂರವಿರಬೇಕು. ಪ್ರಕೃತಿ ಮನುಷ್ಯನ ಜೀವಾಳವೇ ಆಗಿದ್ದು, ಪ್ರಕೃತಿ ಚಿಕಿತ್ಸೆಯಿಂದ ತೊಂದರೆಯಿಲ್ಲ ಹಾಗೂ ದುಶ್ಚಟಗಳಿಂದ ದೂರವಿದ್ದಲ್ಲಿ ಉತ್ತಮ ಆರೋಗ್ಯ ನಮ್ಮದಾಗುವದರಲ್ಲಿ ಸಂಶಯವಿಲ್ಲ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.




ಪಟ್ಟಣದ ಅಗಡಿ ಸನ್‌ರೈಸ್ ಹಾಸ್ಪಿಟಲ್, ಕೆ.ಎಚ್. ಪಾಟೀಲ್ ಪ್ರಕೃತಿ ಚಿಕಿತ್ಸೆ ಹಾಗೂ ಯೋಗ ವಿಜ್ಞಾನ ಸಂಸ್ಥೆ ಹುಲಕೋಟಿ, ಹಿರಿಯ ನಾಗರಿಕರು ಮತ್ತು ನಿವೃತ್ತ ನೌಕರರ ಸಂಘ ಲಕ್ಷ್ಮೇಶ್ವರ ಮತ್ತು ಇನ್ನರ್‌ವೀಲ್ ಕ್ಲಬ್ ಲಕ್ಷ್ಮೇಶ್ವರ ಇವರ ಸಂಯುಕ್ತ ಆಶ್ರಯದಲ್ಲಿ ಪಟ್ಟಣದ ಅಗಡಿ ಸನ್‌ರೈಸ್ ಆಸ್ಪತ್ರೆಯಲ್ಲಿ ಹಮ್ಮಿಕೊಂಡಿರುವ ಮೂರು ದಿನಗಳ ಪ್ರಕೃತಿ ಚಿಕಿತ್ಸೆ ಮತ್ತು ಯೋಗ ಶಿಬಿರವನ್ನು ಗುರುವಾರ ಉದ್ಘಾಟಿಸಿ ಅವರು ಮಾತನಾಡಿದರು.

ಹುಲಕೋಟಿಯ ಯೋಗ ಮತ್ತು ಪ್ರಕೃತಿ ಚಿಕಿತ್ಸಾ ತಜ್ಞರಾದ ಡಾ. ಸತೀಶ ಹೊಂಬಾಳಿ ಪ್ರಾಸ್ತಾವಿಕವಾಗಿ ಮಾತನಾಡಿ, ಮಾನವನು ಪ್ರಕೃತಿಯ ಅವಿಭಾಜ್ಯ ಅಂಗ. ಪ್ರಕೃತಿಯ ಪಂಚಭೂತಗಳಾದ ಮಣ್ಣು, ನೀರು, ವಾಯು, ಅಗ್ನಿ ಮತ್ತು ಆಕಾಶ ಇವುಗಳ ಸಮತೋಲನದ ಮೇಲೆ ಮನುಷ್ಯನ ಆರೋಗ್ಯ ನಿರ್ಧಾರವಾಗುತ್ತದೆ. ಯುವ ಜನತೆ ದುಶ್ಚಟಗಳಿಂದ ದೂರ ಇರಬೇಕು. ಅಲ್ಲದೆ ವಾರಕ್ಕೆ ಒಮ್ಮೆಯಾದರೂ ಉಪವಾಸ ಮಾಡಲೇಬೇಕು. ಇದು ದೇಹದ ರಕ್ಷಣೆಗೆ ಅಗತ್ಯ. ಅದರೊಂದಿಗೆ ಮಿತಾಹಾರ ಸೇವನೆಯೇ ಆರೋಗ್ಯದ ಗುಟ್ಟು. ಪರಿಸರದಲ್ಲಿ ಮಣ್ಣು, ನೀರು, ಗಾಳಿ ಇವುಗಳು ಸರಿಯಾಗಿದ್ದಲ್ಲಿ ಆರೋಗ್ಯವು ಸರಿಯಾಗಿರುತ್ತದೆ. ಒತ್ತಡ ರಹಿತ ಜೀವನ, ಯೋಗ, ಸಾತ್ವಿಕ ಆಹಾರ ಮೈಗೂಡಿಸಿಕೊಂಡು ಉತ್ತಮ ಆರೋಗ್ಯ ಕಾಪಾಡಿಕೊಳ್ಳಬೇಕು. ಪ್ರಕೃತಿಯ ನಿಯಮದಿಂದ ಮನುಷ್ಯ ದೂರ ಸರಿಯುತ್ತಿರುವದರಿಂದ ರೋಗ-ರುಜಿನಗಳ ಹೆಚ್ಚಳಕ್ಕೆ ಕಾರಣವಾಗಿದೆ ಎಂದು ಹೇಳಿದರು.

> ಕಾರ್ಯಕ್ರಮದಲ್ಲಿ ಹಿರಿಯ ನಾಗರಿಕರು ಮತ್ತು ನಿವೃತ್ತ ನೌಕರರ ಸಂಘದ ತಾಲೂಕು ಘಟಕದ ಅಧ್ಯಕ್ಷ ಸಿ.ಆರ್. ಲಕ್ಕುಡಿಮಠ, ಚಂಬಣ್ಣ ಬಾಳಿಕಾಯಿ, ಅಗಡಿ ಆಸ್ಪತ್ರೆಯ ಆಡಳಿತ ವೈದ್ಯಾಧಿಕಾರಿ ಡಾ. ರಾಜಶೇಖರ ಮೂಲಿಮನಿ ಮಾತನಾಡಿದರು.

ಅತಿಥಿಗಳಾಗಿ ಡಾ. ಪಿ.ಡಿ. ತೋಟದ, ಇನ್ನರ್‌ವೀಲ್ ಕ್ಲಬ್ ಸಂಸ್ಥಾಪಕ ಅಧ್ಯಕ್ಷೆ ಮಾಲಾದೇವಿ ದಂದರಗಿ, ಡಾ. ಸುಜಾತಾ ಸಂಗೂರ, ಡಾ. ಎಸ್.ಜಿ. ಹೂವಿನ, ಡಾ. ಶಿವಾನಂದ ಹೂವಿನ, ಡಾ. ಬೆಳವಿಗಿ, ಡಾ. ಸಿ.ಆರ್. ಕಲಿವಾಳಮಠ, ಐ.ಎಸ್. ಮಡಿವಾಳರ, ಅಗಡಿ ಆಸ್ಪತ್ರೆಯ ಯೋಗ ಮತ್ತು ಪ್ರಕೃತಿ ಚಿಕಿತ್ಸಾ ತಜ್ಞೆ ಡಾ. ಶೃತಿ ಹೂವಿನ, ಚನ್ನಪ್ಪ ಕೋಲಕಾರ ಸೇರಿದಂತೆ ಅನೇಕರಿದ್ದರು. ಆಡಳಿತಾಧಿಕಾರಿ ಶ್ರೀಕಾಂತ ಪಾಟೀಲ ಸ್ವಾಗತಿಸಿ, ವಂದಿಸಿದರು.

---

**ದಲಿತ ಸಂಘಟನೆಗಳ ವತಿಯಿಂದ ಮನುಸ್ಮೃತಿ ದಹನ ಕಾರ್ಯಕ್ರಮ**

# ಡಾ. ಅಂಬೇಡ್ಕರರ ಮೇಲಿನ ಅಸಹಿಷ್ಣುತೆ ದೂರವಾಗಲಿ



> ದಲಿತ ಮುಖಂಡ ರಮೇಶ ಬಾಳಮ್ಮನವರ ಮಾತನಾಡುತ್ತ, ರಾಜ್ಯದ ಪ್ರತಿಯೊಂದು ಜಿಲ್ಲೆಗಳಲ್ಲಿ ದಲಿತ, ಸಮಾನಮನಸ್ಕ ಪ್ರಗತಿಪರ ಸಂಘಟನೆಗಳ ಜೊತೆಗೂಡಿ ಇಂತಹ ಕಾರ್ಯಕ್ರಮವನ್ನು ಆಯೋಜಿಸಿ ಯಶಸ್ವಿಗೊಳಿಸಬೇಕೆಂದು ವಿನಂತಿಸಿಕೊಂಡರು.

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಮಹಾತ್ಮ ಗಾಂಧಿ ಸರ್ಕಲ್‌ನಲ್ಲಿ ವಿವಿಧ ದಲಿತ ಸಂಘಟನೆಗಳ ವತಿಯಿಂದ ಮನುಸ್ಮೃತಿ ದಹನ ಕಾರ್ಯಕ್ರಮವನ್ನು ಆಚರಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಸಂಚಾಲಕ ವೆಂಕಟೇಶಯ್ಯ ಮಾತನಾಡಿ, ಸ್ವಾತಂತ್ರ್ಯ ಸಿಕ್ಕು 75 ವರ್ಷ ಕಳೆದರೂ ಇನ್ನೂ ದಲಿತರಿಗೆ ನಿಜವಾದ ಸ್ವಾತಂತ್ರ್ಯ ಸಿಕ್ಕಿಲ್ಲ. ಶ್ರೇಣೀಕೃತ ಜಾತಿ ವ್ಯವಸ್ಥೆಗೆ ಮುನ್ನುಡಿ ಬರೆದು ಭಾರತವನ್ನು ಅಂಧಕಾರಕ್ಕೆ ತಳ್ಳಿದ್ದ ಮನುಸ್ಮೃತಿಯನ್ನು ಡಾ. ಬಿ.ಆರ್. ಅಂಬೇಡ್ಕರ್ ಅವರು ಸುಟ್ಟುಹಾಕಿ 98 ವರ್ಷಗಳಾದವು ಎಂದರು.

ಜಿಲ್ಲಾ ದಲಿತ ಸಂಘರ್ಷ ಸಮಿತಿಯ ಸಂಚಾಲಕ ಸತೀಶ ಹುಲಿ ಮಾತನಾಡಿ, ಸಮ ಸಮಾಜ ನಿರ್ಮಾಣದ ಕನಸು ಹೊತ್ತು, ಸಮಾನತೆ, ಸಹೋದರತೆ, ಭ್ರಾತೃತ್ವದ ಆಶಯದೊಂದಿಗೆ ಸಂವಿಧಾನವನ್ನು ರೂಪಿಸಿಕೊಂಡೆವು. ಈ ಸಂವಿಧಾನ ರಚನೆಗೆ ಬಾಬಾ ಸಾಹೇಬರ ಕೊಡುಗೆ ಅಗಾಧ. ಆದರೆ ಸಂವಿಧಾನ ಸಮರ್ಪಣೆಯಾದ ಸಂದರ್ಭದಲ್ಲಿ ಆರ್‌ಎಸ್‌ಎಸ್‌ನ ಮುಖವಾಣಿ 'ಆರ್ಗನೈಸರ್' ಪತ್ರಿಕೆಯು ನಮ್ಮ ಸಂವಿಧಾನದ ಮೇಲೆ ಅಸಹನೆಯನ್ನು ಹೊರಹಾಕಿತ್ತು ಎಂದು ಸ್ಮರಿಸಿದರು.

ಡಿಎಸ್‌ಎಸ್ ಮುಖಂಡ ಬಸವರಾಜ ಕೆ. ಪೂಜಾರ ಮಾತನಾಡಿ, ಈಗಲೂ ಪರಿಸ್ಥಿತಿ ಬದಲಾಗಿಲ್ಲ. ಆರ್‌ಎಸ್‌ಎಸ್ ಮತ್ತು ಬಿಜೆಪಿಯು ಅಂದಿನಿಂದ ಇಂದಿನವರೆಗೂ ಆಂತರಿಕವಾಗಿಯೂ ಬಹಿರಂಗವಾಗಿಯೂ ಡಾ. ಅಂಬೇಡ್ಕರ್ ಅವರ ಮೇಲೆ, ಸಂವಿಧಾನದ ಮೇಲೆ ಅಸಹಿಷ್ಣುತೆಯನ್ನು ಹೊರಹಾಕುತ್ತಲೇ ಬಂದಿದೆ. ಬಾಬಾ ಸಾಹೇಬರು ಮನುಸ್ಮೃತಿಯನ್ನು ದಹಿಸಿದ ದಿನವಾದ ಡಿಸೆಂಬರ್ 25ರಂದು ಸಾಂಕೇತಿಕವಾಗಿ ಪಾಲಿಸಿ, ಡಾ. ಅಂಬೇಡ್ಕರ ಹೋರಾಟವನ್ನು ಮುಂದುವರಿಸೋಣ ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಡಿಎಸ್‌ಎಸ್ ಜಿಲ್ಲಾ ಸಂಚಾಲಕ ಪ್ರಕಾಶ ಕೇಲೂರ, ವಾಸುದೇವ ಹುಣಸೀಮರದ, ಗುರುರಾಜ ಭಜಂತ್ರಿ, ವಿದ್ಯಾಧರ ದೊಡ್ಡಮನಿ, ಎಸ್.ಎನ್. ಬಳ್ಳಾರಿ ಗುರುಗಳು, ಶಿವಾನಂದ ಗೋಗೇರಿ, ಫಕ್ಕೀರಪ್ಪ ಭಜಂತ್ರಿ, ಮಲ್ಲಪ್ಪ ಸಣ್ಣಕ್ಕಿ, ಬಸವರಾಜ ಸತ್ಯಮ್ಮನವರ, ಪ್ರಕಾಶ ಕಾಳೆ, ಪರಮೇಶ ಕಾಳೆ, ಶಂಭು ಕಾಳೆ, ಪ್ರಕಾಶ ಕಾಳೆ ಹೊಂಬಳ, ಮಂಜು ಹುಣಸೀಮರದ, ಶ್ರೀನಿವಾಸ ಬಾಗಲಕೋಟ, ಸಿದ್ದಣ್ಣ ಮೇಳೆನ್ನವರ ಸೇರಿದಂತೆ ಕಾರ್ಯಕತರು ಉಪಸ್ಥಿತರಿದ್ದರು.

---

# ಗ್ರಾಹಕರ ಪ್ರೀತಿ, ವಿಶ್ವಾಸ ಸಂಪಾದಿಸಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಹಿಳೆಯರು ಇಂದು ಎಲ್ಲ ರಂಗಗಳಲ್ಲಿ ಉತ್ತಮ ಸಾಧನೆ ಮಾಡುತ್ತಿದ್ದು, ಆರ್ಥಿಕವಾಗಿಯೂ ಸ್ವಾವಲಂಬಿಗಳಾಗುತ್ತಿದ್ದಾರೆ. ಸ್ವಂತ ಉದ್ಯೋಗ ಮಾಡುವ ಉದ್ದೇಶವಿದ್ದವರು ಹಲವು ತರಬೇತಿಗಳನ್ನು ಪಡೆದು ಸ್ವಾವಲಂಬಿಗಳಾಗಿ ಜೀವನ ಸಾಗಿಸಬಹುದಾಗಿದ್ದು, ಈ ನಿಟ್ಟಿನಲ್ಲಿ ಪಟ್ಟಣದ ವರ್ಷಾ ಬ್ಯೂಟಿಪಾರ್ಲರ್‌ನವರು ಒಂದು ತಿಂಗಳ ಕಾಲ ಮಹಿಳೆಯರಿಗೆ ಉಚಿತವಾಗಿ ಬ್ಯೂಟಿಷಿಯನ್ ತರಬೇತಿಯನ್ನು ಯಶಸ್ವಿಯಾಗಿ ನೀಡಿದ್ದಾರೆ ಎಂದು ಮುಳಗುಂದದ ಸಹ್ಯಾದ್ರಿ ಗ್ರಾಮೀಣಾಭಿವೃದ್ಧಿ, ನಗರಾಭಿವೃದ್ಧಿ ಹಾಗೂ ವಿವಿಧೋದ್ದೇಶಗಳ ಸಂಘದ ಅಧ್ಯಕ್ಷ ಪ್ರಕಾಶ ಮದ್ದಿನ ಅಭಿಪ್ರಾಯಪಟ್ಟರು.

ಅವರು ಪಟ್ಟಣದ ಸಾಲೇಶ್ವರ ಕಲ್ಯಾಣ ಮಂಟಪದಲ್ಲಿ ಸಹ್ಯಾದ್ರಿ ಗ್ರಾಮೀಣಾಭಿವೃದ್ಧಿ, ನಗರಾಭಿವೃದ್ಧಿ ಹಾಗೂ ವಿವಿಧೋದ್ದೇಶಗಳ ಸಂಘದ ವತಿಯಿಂದ ಏರ್ಪಡಿಲಾಗಿದ್ದ ಉಚಿತ ಬ್ಯೂಟಿಷಿಯನ್ ತರಬೇತಿ ಮುಕ್ತಾಯ ಸಮಾರಂಭದಲ್ಲಿ ಪ್ರಮಾಣಪತ್ರಗಳನ್ನು ವಿತರಿಸಿ ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಬ್ಯೂಟಿ ಪಾರ್ಲರ್‌ಗಳು, ಬ್ಯೂಟಿಷಿಯನ್‌ಗಳ ಸಂಖ್ಯೆ ಹೆಚ್ಚುತ್ತಿದ್ದು, ಆದಾಯದ ನಿರೀಕ್ಷೆಯಲ್ಲಿ ಗುಣಮಟ್ಟದಲ್ಲಿ ಕೊರತೆಯಾಗದಂತೆ, ಚರ್ಮಕ್ಕೆ ಹಾನಿಯಾಗದ ಸೌಂದರ್ಯವರ್ಧಕಗಳನ್ನು ಬಳಸಿಕೊಂಡು ಎಲ್ಲರಿಗೂ ಒಪ್ಪಿಗೆಯಾಗುವ ಗುಣವನ್ನು ಬೆಳೆಸಿಕೊಳ್ಳಬೇಕೆಂದು ಸಲಹೆ ನೀಡಿದರು. ತರಬೇತುದಾರರಾದ ಪುಷ್ಪ ಅಡವಿ ಮಾತನಾಡಿ, ಬ್ಯೂಟಿಪಾರ್ಲರ್‌ಗಳಲ್ಲಿ ಗುಣಮಟ್ಟ ಕಾಯ್ದುಕೊಳ್ಳುವದು, ಗ್ರಾಹಕರ ಪ್ರೀತಿ ವಿಶ್ವಾಸ ಸಂಪಾದಿಸುವದು, ಇನ್ನಿತರ ಪಾರ್ಲರ್‌ಗಳೊಂದಿಗೆ ಸ್ಪರ್ಧೆಗೆ ಇಳಿಯದೆ ಹೊಂದಾಣಿಕೆಯಿಂದ ಸಾಗುವದು ಅವಶ್ಯವಾಗಿದೆ. ಕಲಿತ ವಿದ್ಯೆಯು ಸಾರ್ಥಕವಾಗಬೇಕಾದರೆ ಗ್ರಾಹಕರ ಮೆಚ್ಚುಗೆ ಪಡೆಯುವದು ಅವಶ್ಯ ಎನ್ನುವದನ್ನು ತರಬೇತಿ ಪಡೆದವರು ತಿಳಿದುಕೊಂಡು ಸಾಗಬೇಕು. ಇದರಿಂದ ಸ್ವಾವಲಂಬನೆಯ ಜೀವನ ಸಾಗಿಸುವಂತಾದರೆ ತರಬೇತಿ ನೀಡಿರುವದಕ್ಕೆ ಸಾರ್ಥಕತೆ ಎನಿಸುತ್ತದೆ ಎಂದರು.

ದಶರಥ ಕೋಟೆಗೌಡ್ರ, ದಿಗಂಬರ ಪೂಜಾರ, ಶೈಲಜಾ ಮುಂತಾದವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ತರಬೇತಿ ಪಡೆದ ಎಲ್ಲ ಮಹಿಳೆಯರಿಗೆ ಪ್ರಮಾಣಪತ್ರಗಳನ್ನು ವಿತರಿಸಲಾಯಿತು.

---

# ಸಹಕಾರಿ ಸಂಘಗಳು ರಾಜಕೀಯ ಬದಿಗಿಟ್ಟು ಬೆಳೆಯುವಂತಾಗಲಿ

▸▸ ಮೊದಲನೇ ಪುಟದಿಂದ

ಕಲ್ಪಿಸಲಾಗುವುದು. ಶತಮಾನ ಪೂರೈಸಿರುವ ಸೊರಟೂರು ಸಹಕಾರಿ ಸಂಘ ಮಲ್ಲಪ್ಪ ಕಲ್ಗುಡಿ ಅವರ ನೇತೃತ್ವದಲ್ಲಿ ಹೆಚ್ಚು ಕ್ರಿಯಾಶೀಲವಾಗಿ ಕೆಲಸ ನಿರ್ವಹಿಸುತ್ತಿದ್ದು, ಇನ್ನಷ್ಟು ಬೆಳವಣಿಗೆ ಹೊಂದಬೇಕು ಎಂದರು.

ಮುಖಂಡರಾದ ಭದ್ರೇಶ ಕುಸುಲಾಪೂರ ಮಾತನಾಡಿ, ಗ್ರಾಮೀಣ ಸಹಕಾರಿ ಸಂಘಗಳ ಬೆಳವಣಿಗೆಗೆ ಸಚಿವ ಎಚ್.ಕೆ. ಪಾಟೀಲರ ಸಹಾಯದಿಂದ ಎಲ್ಲ ಸಂಘಗಳು ವಿವಿಧ ಸೌಲಭ್ಯಗಳನ್ನು ರೈತರಿಗೆ ನೀಡುತ್ತಿದ್ದು, ಸೊರಟೂರಿನ ಒಟ್ಟು ನಾಲ್ಕು ಸಹಕಾರಿ ಸಂಘಗಳು ಸ್ಥಾಪನೆಯಾಗಿವೆ. ಆ ಸಂಘಗಳು ಬೆಳವಣಿಗೆ ಹೊಂದಲು ಅನುದಾನವನ್ನು ಒದಗಿಸಬೇಕು ಎಂದರು.

ಧಾರವಾಡ ಕೆಸಿಸಿ ಬ್ಯಾಂಕ್ ನಿರ್ದೇಶಕ ಸೊರಟೂರ ಸಹಕಾರಿ ಸಂಘದ ಅಧ್ಯಕ್ಷ ಮಲ್ಲಪ್ಪ ಕಲ್ಲಗುಡಿ ಮಾತನಾಡಿ, ಸದ್ಯ 47 ಲಕ್ಷ ರೂ ವಿಶೇಷ ಅನುದಾನದಡಿಯಲ್ಲಿ 500 ಮೆಟ್ರಿಕ್ ಟನ್ ಸಾಮರ್ಥ್ಯದ ಗೋಡಾನ್ ನಿರ್ಮಾಣಕ್ಕೆ ಭೂಮಿಗೆ ನೆರವೇರಿದೆ. ಮುಂದಿನ ದಿನಗಳಲ್ಲಿ 1 ಕೋಟಿ ರೂಪಾಯಿ ನೆಪೆಡ್ ಸಂಸ್ಥೆಯ ವಿಶೇಷ ಅನುದಾನದಡಿಯಲ್ಲಿ ದೊಡ್ಡ ಪ್ರಮಾಣದ ಗೋಡಾನ್ ನಿರ್ಮಾಣದ ಗುರಿ ಹೊಂದಲಾಗಿದೆ. ಗದಗ ತಾಲೂಕಿನ ಎಲ್ಲ ಸಹಕಾರಿ ಸಂಘಗಳು ರೈತರ ಪರವಾಗಿ ಕಾರ್ಯನಿರ್ವಹಿಸುತ್ತಿದ್ದು, ಸಚಿವ ಹೆಚ್.ಕೆ. ಪಾಟೀಲ ಹಾಗೂ ಡಿ.ಆರ್. ಪಾಟೀಲರ ಮಾರ್ಗದರ್ಶನದಲ್ಲಿ ಸಹಕಾರಿ ಸಂಘಗಳು ಜನೋಪಯೋಗಿ ಕೆಲಸ ಮಾಡುತ್ತಿವೆ ಎಂದರು.

ಈ ಸಂದರ್ಭದಲ್ಲಿ ಡಿ.ಆರ್. ಪಾಟೀಲ, ಗುರಣ್ಣ ಬಳಗಾನೂರ, ಸಿದ್ದು ಪಾಟೀಲ, ಪ್ರಮೋದ ಇನಾಮದಾರ, ಸಹಕಾರಿ ಸಂಘದ ಉಪಾಧ್ಯಕ್ಷರಾದ ಪರಸಪ್ಪ ಮಲ್ಲಾರಿ, ಫಕೀರಪ್ಪ ಮಟ್ಟಿ, ಪರಶುರಾಮ ಹೂಗಾರ, ರಾಮಣ್ಣ ತಳವಾರ, ಮಹಾಂತೇಶ್ವ ಹಳ್ಳಿ, ಮುರುಗೇಶ ಕುಸಲಾಪರ, ಚನ್ನಪ್ಪ ಕುಸಲಾಪೂರ, ಮೆಹಬೂಬಸಾಬ ಬಾಬುಖಾನವರ, ನೀಲವ್ವ ಪಾಟಿಲ, ಚೆನ್ನವ್ವ ತಳವಾರ, ಬಸವರಾಜ ಗಾಣಿಗೇರ, ಶರೀಫಸಾಬ ಅತ್ತಿಕಟ್ಟಿ, ವೀರೇಶ ಬೋಳ್ನವರ, ಮಂಜು ಗದುಗಿನ, ತಿರಕಪ್ಪ ಬೋಳನವರ, ವೆಂಕನಗೌಡ ಪಾಟೀಲ, ಮಾನಪ್ಪ ಲಮಾಣಿ, ಮೇಲಗಿರಿಗೌಡ ಪಾಟೀಲ, ಜಯಶ್ರೀ ಬಂಕಾಪುರ, ಮೆಹಬೂಬ ಸಾಬ ಯಕಲಾಸಪೂರ, ಶಿವಮೂರ್ತಿ ಕರಿಗೌಡ್ರ,, ರಾಮಣ್ಣ ಶಲಿಯಪ್ಪನವರ, ಅಡಿವೆಪ್ಪ ಕನ್ನೂರ, ಮಹದೇವಪ್ಪ ಹಡಪದ ಮುಂತಾದವರು ಇದ್ದರು.

---

# ಸಾರ್ವಜನಿಕರು ನಿರ್ಭಯವಾಗಿ ದೂರು ಸಲ್ಲಿಸಿ

▸▸ ಮೊದಲನೇ ಪುಟದಿಂದ



ಕಳುಹಿಸಿಕೊಡುತ್ತಾರೆ. ಇದರಿಂದ ಕೆಲವೇ ಗಂಟೆಗಳಲ್ಲಿ ಪರಿಹಾರ ಕಂಡುಕೊಳ್ಳಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ನಗರದ 16ನೇ ವಾರ್ಡ್ ಪೌರ ಕಾರ್ಮಿಕರಾದ ಮಂಜುಳಾ ದುರಗಪ್ಪ ಬಂಗಿ ಅವರು ಪ್ರ.ಪ್ರ ಮೂಲಕ ತಮಗೆ ಮನೆ ಮಂಜೂರು ಮಾಡಿಕೊಡುವಂತೆ ಅಹವಾಲನ್ನು ನಿವೇದಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ಜಿಲ್ಲಾಧಿಕಾರಿ ಸಿ.ಎನ್ ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಪ್ರಭು ಬುರಬುರೆ, ಸಿದ್ದು ಪಾಟೀಲ, ಅಶೋಕ ಮಂದಾಲಿ, ಎಸ್. ಎನ್ ಬಳ್ಳಾರಿ, ಗಂಗಪ್ಪ ಎಂ, ಎ.ಎ. ಕಂಬಾಳಿಮಠ, ರಾಜಾರಾಮ್ ಪವಾರ, ವಸಂತ ಮಡ್ಲೂರ, ಕೊಟ್ರೇಶ್ ವಿಭೂತಿ ಮುಂತಾದವರು ಉಪಸ್ಥಿತರಿದ್ದರು.

---

# ವಿದ್ಯಾರ್ಥಿಗಳಿಗೆ ಸುವರ್ಣಸೌಧ ದರ್ಶನ ಭಾಗ್ಯ!

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಾಲಾ-ಕಾಲೇಜು ಹಂತದಲ್ಲಿ ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸದ ಜೊತೆಗೆ ವಿವಿಧ ಪ್ರೇಕ್ಷಣೀಯ ಹಾಗೂ ಶಾಸನಬದ್ಧ ಸಂಸ್ಥೆಗಳನ್ನು ನೋಡಲು ಅವಕಾಶ ಕಲ್ಪಿಸುವ ಮೂಲಕ ಅವರಲ್ಲಿ ಕನಸು ಬಿತ್ತುವ ಕೆಲಸಕ್ಕೆ ಶಾಸಕ ಡಾ. ಚಂದ್ರು ಲಮಾಣಿ ಮುಂದಾದರು.

ಶಿರಹಟ್ಟಿ ತಾಲೂಕಿನ ವಿದ್ಯಾರ್ಥಿಗಳಿಗೆ ಅಂತಹ ಅವಕಾಶ ಕಲ್ಪಿಸಿ ಮಾದರಿಯಾಗಿದ್ದಾರೆ. ಕಳೆದ ವಾರ ಬೆಳಗಾವಿಯ ಸುವರ್ಣ ಸೌಧದಲ್ಲಿ ನಡೆದ ಅಧಿವೇಶನವನ್ನು ವೀಕ್ಷಿಸುವ ಅವಕಾಶವನ್ನು ಶಿರಹಟ್ಟಿ ತಾಲೂಕಿನ ವಿವಿಧ ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ಕಲ್ಪಿಸಿ ಖುದ್ದಾಗಿ ಎಲ್ಲಾ ವಿದ್ಯಾರ್ಥಿ/ಸಿಬ್ಬಂದಿಗಳನ್ನು ಬೆಳಗಾವಿಯ ಸುವರ್ಣ ಸೌಧಕ್ಕೆ ಬರಮಾಡಿಕೊಂಡು ವಿಶೇಷ ಕಾಳಜಿ ಹಾಗೂ ಮುತುವರ್ಜಿ ವಹಿಸಿ ಅಧಿವೇಶನ ನಡೆಯುವ ಸ್ಥಳ, ಕಲಾಪಗಳ ವೀಕ್ಷಣೆ, ವಿವಿಧ ಮಹತ್ವದ ಜಾಗಗಳನ್ನು ವಿದ್ಯಾರ್ಥಿಗಳಿಗೆ ಸ್ವತಃ ತೋರಿಸಿ ಅವುಗಳ ಮಹತ್ವದ ಕುರಿತು ವಿವರಿಸಿದರು.

ಇಂದಿಗೂ ಶಾಸಕ ಡಾ. ಚಂದ್ರು ಲಮಾಣಿ ಶಾಲಾ-ಕಾಲೇಜುಗಳಿಗೆ ಭೇಟಿ ನೀಡಿದಾಗ ಸ್ವತಃ ಪಾಠ ಮಾಡುವ ಮೂಲಕ ವಿದ್ಯಾರ್ಥಿಗಳಲ್ಲಿ ಓದಿನತ್ತ ಆಸಕ್ತಿ ಹೆಚ್ಚಿಸಿ ತಮ್ಮ ವಿದ್ಯಾರ್ಥಿ ಜೀವನವನ್ನು ಮೆಲಕು ಹಾಕಿ, ಅವರಲ್ಲಿ ಸುಂದರ ಕನಸು ಕಟ್ಟುವ ಕೆಲಸವನ್ನು ಮಾಡುತ್ತಿರುವುದನ್ನು ಶಿಕ್ಷಕ ಸಮೂಹ ಹೆಮ್ಮೆಯಿಂದ ಹೇಳಿಕೊಳ್ಳುತ್ತಿದೆ.

ಈ ಸಂದರ್ಭದಲ್ಲಿ ಡಾ. ಬಸವರಾಜ ಧಾರವಾಡ, ಡಾ. ಬಿ.ಜಿ. ಜವಳಿ, ನಿವೃತ್ತ ಮುಖ್ಯೋಪಾಧ್ಯಾಯ ಎಸ್. ಎಂ. ಅಗಡಿ, ಎಂ.ಎಸ್. ಶಿವಶೆಟ್ಟಿ, ಅವಿನಾಶ ಸಾಲಮನಿ ಸೇರಿದಂತೆ ಶಾಲಾ-ಕಾಲೇಜುಗಳ ಸಿಬ್ಬಂದಿಗಳು ಉಪಸ್ಥಿತರಿದ್ದರು.



---

# ಸ್ವಾದಿ ಚನ್ನಬಸವ ಶ್ರೀಗಳ ಪುರ ಪ್ರವೇಶ ಡಿ. 29ಕ್ಕೆ

■ ವಿಜಯಸಾಕ್ಷಿ ಸುದ್ದಿ, ರೋಣ

ಡಿ. 29ರಂದು ಮಾರನಬಸರಿ ಗ್ರಾಮದ ಸರ್ವಧರ್ಮ ಸಮನ್ವಯ ಪೀಠದ ನೂತನ ಪೀಠಾಧಿಪತಿಗಳಾಗಿ ನಿಯುಕ್ತಿಗೊಂಡಿರುವ ಸ್ವಾದಿ ಚನ್ನಬಸವ ಶ್ರೀಗಳ ಪುರ ಪ್ರವೇಶ ಕಾರ್ಯಕ್ರಮ ಜರುಗಲಿದ್ದು, ಕಾರ್ಯಕ್ರಮದಲ್ಲಿ ಸಾವಿರಾರು ಭಕ್ತರು ಭಾಗಿಯಾಗಲಿದ್ದಾರೆ ಎಂದು ಸರ್ವಧರ್ಮ ಸಮನ್ವಯ ಪೀಠ ಹಾಗೂ ಶಿವಮೊಗ್ಗ ಜಿಲ್ಲೆಯ ಹಿರೇಮಾಗಡಿ ವಿರಕ್ತ ಮಠದ ಶಿವಮೂರ್ತಿ ಶ್ರೀಗಳು ಹೇಳಿದರು.

ಅವರು ಗುರುವಾರ ಮಾರನಬಸರಿ ಗ್ರಾಮದ ಸರ್ವಧರ್ಮ ಸಮನ್ವಯ ಪೀಠದ ಸಭಾಂಗಣದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದರು.



ಶ್ರೀಗಳ ಪುರ ಪ್ರವೇಶದ ನಿಮಿತ್ತ 5 ದಿನಗಳ ಕಾಲ ಕಲ್ಯಾಣ ದರ್ಶನ ಆಧ್ಯಾತ್ಮಿಕ ಪ್ರವಚನ ನಡೆಯಲಿದ್ದು, ಐದು ದಿನಗಳವರೆಗೆ ನಿರಂತರ ದಾಸೋಹ ಜರುಗಲಿದೆ. ನಿತ್ಯ ವಿವಿಧ ಮಠಾಧೀಶರು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಭಕ್ತರಿಗೆ ಆಶೀರ್ವಚನ ನೀಡಲಿದ್ದಾರೆ. ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ವಿದ್ಯಾರ್ಥಿಗಳು ಮತ್ತು ಗಣ್ಯರನ್ನು ಸನ್ಮಾನಿಸಲಾಗುವುದು ಎಂದರು.

ಡಿ. 29ರಂದು ಬೆಳಿಗ್ಗೆ 10ಕ್ಕೆ ಸ್ವಾದಿ ಚನ್ನಬಸವ ಶ್ರೀಗಳ ಪುರ ಪ್ರವೇಶದ ಮೆರವಣಿಗೆ ಗ್ರಾಮದ ಮಾರುತಿ ದೇವಸ್ಥಾನದಿಂದ ಸಕಲ ವಾದ್ಯ ಮೇಳಗಳೊಂದಿಗೆ ಹೊರಡಲಿದೆ. ನಂತರ ಸರ್ವಧರ್ಮ ಸಮನ್ವಯ ಪೀಠ ತಲುಪಲಿದ್ದು, ಸಂಜೆ ಮಠಾಧೀಶರುಗಳ ಹಾಗೂ ಗಣ್ಯರ ಸಮ್ಮುಖದಲ್ಲಿ ಸಮಾರೋಪ ಸಮಾರಂಭ ನಡೆಯಲಿದೆ. ಸುತ್ತಮುತ್ತಲಿನ ಭಕ್ತರು ಧಾರ್ಮಿಕ ಕಾರ್ಯದಲ್ಲಿ ಭಾಗಿಯಾಗುವ ಮೂಲಕ ಶ್ರೀಗಳ ಆಶೀರ್ವಚನವನ್ನು ಆಲಿಸಬೇಕು ಎಂದರು.

ಈ ಸಂಧರ್ಭದಲ್ಲಿ ಗ್ರಾಮದ ಮುಖಂಡರುಗಳು ಹಾಗೂ ಸರ್ವಧರ್ಮ ಸಮನ್ವಯ ಪೀಠದ ಕಮಿಟಿಯ ಎಲ್ಲ ಪದಾಧಿಕಾರಿಗಳು ಉಪಸ್ಥಿತರಿದ್ದರು.

---

# ನಿಧನ

## ಕರಿಯಪ್ಪ ಹೊನ್ನಿನಾಯ್ಕರ



**ಗದಗ:** ತಾಲೂಕಿನ ಹುಲಕೋಟಿ ಗ್ರಾಮದ ಕುರುಬ ಸಮಾಜದ ಹಿರಿಯರಾದ ಕರಿಯಪ್ಪ ಬಸಪ್ಪ ಹೊನ್ನಿನಾಯ್ಕರ (89) ಇವರು ದಿ.25/12/2025ರ ಗುರುವಾರದಂದು ಬೆಳಿಗ್ಗೆ ನಿಧನರಾದರು.

ಮೃತರ ಅಂತ್ಯಕ್ರಿಯೆ ಅಂದೇ ಜರುಗಿತು. ಮೃತರು ಪತ್ನಿ, ಪುತ್ರ. ಪುತ್ರಿ, ಅಳಿಯ, ಮೊಮ್ಮಕ್ಕಳು, ಮರಿ ಮೊಮ್ಮಕ್ಕಳು ಹಾಗೂ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ.

# ಗದಗ-ಬೆಟಗೇರಿಯಲ್ಲಿ ಸಂಭ್ರಮದ ಕ್ರಿಸ್‌ಮಸ್!











■ ವಿಜಯಸಾಕ್ಷಿ ಸುದ್ದಿ, ಗದಗ

ಜಗತ್ತಿಗೆ ಶಾಂತಿ ಮತ್ತು ಪ್ರೀತಿಯ ಸಂದೇಶ ಸಾರಿದ ಯೇಸು ಕ್ರಿಸ್ತರ ಜನ್ಮದಿನವಾದ 'ಕ್ರಿಸ್ ಮಸ್' ಹಬ್ಬವನ್ನು ಗುರುವಾರ ಗದಗ-ಬೆಟಗೇರಿ ಅವಳಿ ನಗರದಲ್ಲಿ ಸಡಗರ-ಸಂಭ್ರಮದಿಂದ ಆಚರಿಸಲಾಯಿತು.

ಹಬ್ಬದ ಅಂಗವಾಗಿ ಗದಗ-ಬೆಟಗೇರಿಯಲ್ಲಿ ಸುಮಾರು 12 ಚರ್ಚ್‌ಗಳಲ್ಲಿ ಬೆಳಗ್ಗೆ ವಿಶೇಷ ಪೂಜೆ ಹಾಗೂ ಸಾಮೂಹಿಕ ಪ್ರಾರ್ಥನೆಗಳು ಜರುಗಿದವು.

ಕ್ರೈಸ್ತ ಬಾಂಧವರು ಹೊಸ ಬಟ್ಟೆ ಧರಿಸಿ, ಕುಟುಂಬ ಸಮೇತ ಚರ್ಚ್‌ಗಳಿಗೆ ಆಗಮಿಸಿ ಪ್ರಾರ್ಥಿಸಿದರು.

ಪ್ರಾರ್ಥನೆಯ ನಂತರ ಕ್ರೈಸ್ತ ಬಾಂಧವರು ಪರಸ್ಪರ ಕೈಕುಲುಕಿ, ಆಲಿಂಗಿಸುವ ಮೂಲಕ ಶುಭಾಶಯಗಳನ್ನು ವಿನಿಮಯ ಮಾಡಿಕೊಂಡರು. ಪರಸ್ಪರ ಸಿಹಿ ಹಂಚುವ ಮೂಲಕ ಸೌಹಾರ್ದತೆ ಮೆರೆದರು. ನಗರದ ಪ್ರಮುಖ ಚರ್ಚ್‌ಗಳ ಆವರಣದಲ್ಲಿ ಯೇಸುವಿನ ಜನನದ ದೃಶ್ಯವನ್ನು ಬಿಂಬಿಸುವ 'ಗೋದಲಿಕಟ್ಟೆ' ನೋಡುಗರ ಗಮನ ಸೆಳೆಯಿತು. ಕ್ರಿಸ್ ಮಸ್ ಹಬ್ಬದ ಅಂಗವಾಗಿ ಚರ್ಚ್‌ಗಳನ್ನು ವಿದ್ಯುತ್ ದೀಪಾಲಂಕಾರ ಹಾಗೂ ಕ್ರಿಸ್ ಮಸ್ ಟ್ರೀಗಳಿಂದ ಆಕರ್ಷಕವಾಗಿ ಅಲಂಕರಿಸಲಾಗಿತ್ತು. ಸಾಂತಾಕ್ಲಾಸ್ ವೇಷಧಾರಿಗಳು ಮಕ್ಕಳಿಗೆ ಉಡುಗೊರೆ ನೀಡಿ ಸಂಭ್ರಮಿಸಿದರು.



### ಸಚಿವ ಎಚ್ .ಕೆ. ಪಾಟೀಲ ಭಾಗಿ



ಬೆಟಗೇರಿಯ ಸೇಂಟ್ ಇಗ್ನೇಷಿಯಸ್ ಚರ್ಚ್ ಮತ್ತು ವರ್ಥ್ ಮೆಮೋರಿಯಲ್ ಚರ್ಚ್‌ನಲ್ಲಿ ಕ್ರಿಸ್ ಮಸ್ ಅಂಗವಾಗಿ ನಡೆದ ವಿಶೇಷ ಸಾಮೂಹಿಕ ಪ್ರಾರ್ಥನೆಯಲ್ಲಿ ಸಚಿವ ಬೆಚ್ ಕೆ ಪಾಟೀಲ್ ಭಾಗಿಯಾಗಿದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ಜಗತ್ತಿನಲ್ಲಿ ಇಂದು ವಿಕೃತ ಮನಸ್ಸುಗಳಿಂದಾಗಿ ಶಾಂತಿ, ಪ್ರೀತಿ ಮತ್ತು ಭ್ರಾತೃತ್ವಕ್ಕೆ ಧಕ್ಕೆ ಬರುತ್ತಿರುವ ಸಂದರ್ಭದಲ್ಲಿ, ಯೇಸು ಕ್ರಿಸ್ತರ ಶಾಂತಿ ಸಂದೇಶಗಳ ಅನಿವಾರ್ಯತೆ ಹಿಂದಿಗಿಂತಲೂ ಹೆಚ್ಚಾಗಿದೆ. ಕರ್ನಾಟಕವು ಸರ್ವ ಜನಾಂಗದ ಶಾಂತಿಯ ತೋಟವಾಗಿದೆ. ಇಲ್ಲಿ ಎಲ್ಲ ಧರ್ಮದವರೂ ಸಮನ್ವಯದಿಂದ ಬಾಳುತ್ತಿದ್ದಾರೆ. ಯೇಸುವಿನ ಕೃಪೆಯಿಂದ ನಾಡಿನಲ್ಲಿ ಶಾಂತಿ ಮತ್ತು ಪ್ರೀತಿ ಸದಾಕಾಲ ನೆಲೆಸಲಿ. ಕ್ರಿಸ್ತರ ಸಂದೇಶಗಳನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ನಿಜವಾದ ಶಾಂತಿ ಸ್ಥಾಪನೆ ಸಾಧ್ಯವಾಗಲಿದೆ ಎಂದು ಅಭಿಪ್ರಾಯಪಟ್ಟರು.

## ರಾಜ್ಯಮಟ್ಟದ ಹೆಚ್ ಎನ್, ಚೈತನ್ಯ ಶ್ರೀ ಪ್ರಶಸ್ತಿಗೆ ಆಯ್ಕೆ





■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತು ಪ್ರತಿ ವರ್ಷ ವಿವಿಧ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ ಮಹನೀಯರನ್ನು ಗುರುತಿಸಿ ಕೊಡ ಮಾಡುವ ರಾಜ್ಯಮಟ್ಟದ ಹೆಚ್ ಎನ್ ಪ್ರಶಸ್ತಿ ಹಾಗೂ ಚೈತನ್ಯ ಶ್ರೀ ಪ್ರಶಸ್ತಿಗೆ ಗದಗ ಜಿಲ್ಲೆಯ ಇಬ್ಬರು ಸೇವಾ ಸಾಧಕರು ಆಯ್ಕೆಯಾಗಿದ್ದಾರೆ.

ಇದೇ ತಿಂಗಳ ಡಿಸೆಂಬರ್ 28 29 ಹಾಗೂ 30 ರಂದು ಯಾದಗಿರಿ ಜಿಲ್ಲೆಯಲ್ಲಿ ನಡೆಯುವ ರಾಜ್ಯಮಟ್ಟದ ಐದನೇ ವೈಜ್ಞಾನಿಕ ಸಮ್ಮೇಳನದಲ್ಲಿ ಪ್ರಶಸ್ತಿ ಪ್ರಧಾನ ಮಾಡಲಾಗುತ್ತದೆ. ಗದಗ ಜಿಲ್ಲೆಯ ಗಜೇಂದ್ರಗಡ ತಾಲೂಕಿನ ರಾಜೂರು ಗ್ರಾಮದ ಡಾ ಮಂಜುನಾಥ್ ಮಳಿಗಿಯವರು ಎಚ್ ನರಸಿಂಹಯ್ಯನವರ ಹೆಸರಿನಲ್ಲಿ ಕೊಡ ಮಾಡುವ ಎಚ್ ಎನ್ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ. ವೃತ್ತಿಯಿಂದ ವೈದ್ಯರಾಗಿ ಸಮಾಜಮುಖಿ ಸೇವೆ ಸಲ್ಲಿಸಿದ ಇವರು ಸಮಾಜದ ಹಲವು ಆಯಾಮಗಳಲ್ಲಿ ನಿಸ್ವಾರ್ಥ ಸೇವೆಯನ್ನು ಸಲ್ಲಿಸಿದ್ದಾರೆ. ಲಕ್ಷ್ಮೇಶ್ವರ ತಾಲೂಕಿನ ಶ್ರೀಮತಿ ನಿರ್ಮಲಾ ಗಂಗಾಧರ ಅರಳಿಯವರು ರಾಜ್ಯಮಟ್ಟದ ಚೈತನ್ಯ ಶ್ರೀ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.

ಶರಣ ತತ್ವ ಚಿಂತನೆ ಅಡಿಯಲ್ಲಿ ಸೇವೆ ಸಲ್ಲಿಸುತ್ತಿರುವ ಇವರು ಲಕ್ಷ್ಮೇಶ್ವರ ತಾಲೂಕಿನ ಕದಳಿ ಮಹಿಳಾ ವೇದಿಕೆಯ ಅಧ್ಯಕ್ಷರಾಗಿ ಸಂಘಟನಾತ್ಮಕ ಕಾರ್ಯದಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿದ್ದಾರೆ. ಜೊತೆಗೆ ಇನ್ನರ್ ವಿಲ್ ಕ್ಲಬ್‌ನ ಸದಸ್ಯರಾಗಿ, ಸಿದ್ದೇಶ್ವರ ಸತ್ಸಂಗ ಬಳಗ, ರಾಜರಾಜೇಶ್ವರಿ ಸಾಂಸ್ಕೃತಿಕ ವೇದಿಕೆಯ ಸದಸ್ಯರಾಗಿ ಹಲವು ಸಮಾಜಮುಖಿ ಕಾರ್ಯಗಳಲ್ಲಿ ನಿಸ್ವಾರ್ಥ ಸೇವೆ ಸಲ್ಲಿಸಿದ್ದಾರೆ. ಪರಿಷತ್ತಿನ ಸಂಸ್ಥಾಪಕ ಅಧ್ಯಕ್ಷರಾದ ಡಾ ಹುಲಿಕಲ್ ನಟರಾಜ್ ಅವರ ಸಾರಥ್ಯದಲ್ಲಿ ನಡೆಯುವ ಈ ಸಮ್ಮೇಳನವು ವೈಚಾರಿಕ ಚಿಂತನೆಗಳ ವೇದಿಕೆಯಾಗಿದೆ. ಮೂಢನಂಬಿಕೆಗಳನ್ನು ಮೆಟ್ಟಿನಿಂತು ವೈಜ್ಞಾನಿಕ ಮನೋಭಾವ ಬೆಳೆಸಿಕೊಳ್ಳುವಲ್ಲಿ ಮಕ್ಕಳು, ಯುವಕರು, ಹಾಗೂ ಸಮಾಜದ ಪ್ರತಿಯೊಬ್ಬ ಪ್ರಜೆಗೆ ಅರಿವು ಮೂಡಿಸುವ ಸಮ್ಮೇಳನವಾಗಿದೆ. ಪರಿಷತ್ತಿನ ರಾಜ್ಯಧ್ಯಕ್ಷರಾದ ಡಾ.ಹುಲಿಕಲ್ ನಟರಾಜ್ ಹಾಗೂ ಪರಿಷತ್ತಿನ ರಾಜ್ಯ ಉಪಾಧ್ಯಕ್ಷರಾದ ಶ್ರೀಮತಿ ಸುಧಾ ಹುಚ್ಚಣ್ಣವರ ಪ್ರಶಸ್ತಿಗೆ ಆಯ್ಕೆಯಾದ ಮಹನೀಯರಿಗೆ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ. ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತಿನ ಗದಗ ಜಿಲ್ಲಾಧ್ಯಕ್ಷರಾದ ಶ್ರೀ ವಿಜಯಕುಮಾರ್ ಬಣಕಾರ್ ಅವರು ಪ್ರಕಟಣೆಯ ಮೂಲಕ ಈ ಮಾಹಿತಿಯನ್ನು ತಿಳಿಸಿದ್ದಾರೆ.

## ಉತ್ತಮ ಸೇವೆಗೆ ಆರ್ಝೂದ್ ಬ್ಯಾಂಕ್ ಬದ್ಧ

■ ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಪ್ರತಿಷ್ಠಿತ ಸಹಕಾರಿ ಬ್ಯಾಂಕ್‌ಗಳಲ್ಲಿ ಒಂದಾಗಿರುವ ದಿ. ಆರ್ಝೂದ್ ಕೋ-ಆಪ್ ಬ್ಯಾಂಕ್ ಗ್ರಾಹಕರಿಗೆ ಉತ್ತಮ ಸೇವೆ, ಸೌಲಭ್ಯ ಒದಗಿಸಲು ಬದ್ಧತೆಯಿಂದ ಕಾರ್ಯ ಮಾಡುತ್ತಿದೆ ಎಂದು ಬ್ಯಾಂಕ್‌ನ ಚೇರಮನ್ ಸರಫ್‌ರಾಜಅಹ್ಮದ್ ಎಸ್.ಉಮಚಗಿ ಹೇಳಿದರು.

ಅವರು ಬ್ಯಾಂಕ್‌ನ ಆವರಣದಲ್ಲಿ ಏರ್ಪಡಿಸಿದ್ದ ಗ್ರಾಹಕರ ಸಂಪರ್ಕ ಸಭೆ ಹಾಗೂ 2026ರ ದಿನದರ್ಶಿಕೆ ಬಿಡುಗಡೆ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು.



ಗ್ರಾಹಕರು ಈ ಬ್ಯಾಂಕ್‌ನ ಮೇಲೆ ಇಟ್ಟಿರುವ ವಿಶ್ವಾಸದಿಂದಾಗಿ ಹಾಗೂ ಅವರ ಠೇವಣಿ, ಭದ್ರತಾ ಠೇವಣಿಯಿಂದಾಗಿ ಬ್ಯಾಂಕ್ ಲಾಭದೆಡೆಗೆ ಮುನ್ನಡೆದಿದೆ. ಬಡ ಮತ್ತು ಮಧ್ಯಮ ವರ್ಗದ ಸಣ್ಣ ವ್ಯಾಪಾರಸ್ಥರಿಗೆ ಸಾಲ ಸೌಲಭ್ಯ ನೀಡುವ ಮೂಲಕ ಅವರು ಸ್ವಯಂ ಉದ್ಯೋಗ ಕೈಗೊಂಡು ಆರ್ಥಿಕವಾಗಿ ಸಬಲರನ್ನಾಗಿಸಲು ಬ್ಯಾಂಕ್ ಸಹಕರಿಸುತ್ತಿದೆ ಎಂದರು.

ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಗದಗ ಹೆಸ್ಕಾಂನ ಅಧೀಕ್ಷಕ ಅಭಿಯಂತರರಾದ ನಜಮುನ್ನಿಸ್ ಕೆ. ಅಲ್ಲಾವಲಿ ನೂತನ ವರ್ಷದ ದಿನದರ್ಶಿಕೆ ಬಿಡುಗಡೆಗೊಳಿಸಿ ಮಾತನಾಡಿ, ಆರ್ಝೂದ್ ಬ್ಯಾಂಕ್ ಪ್ರಗತಿಪಥದಲ್ಲಿ ಸಾಗಿ ಬಂದಿರುವದು ಹೆಮ್ಮೆಯ ವಿಚಾರ. ಬರಲಿರುವ ದಿನಗಳಲ್ಲಿ ಬ್ಯಾಂಕ್ ಗ್ರಾಹಕರಿಗೆ ಇನ್ನೂ ಹೆಚ್ಚಿನ ರೀತಿಯ ಸೌಲಭ್ಯಗಳನ್ನು ನೀಡಲಿ ಎಂದರು.

ಇದೇ ಸಂದರ್ಭದಲ್ಲಿ ನಿವೃತ್ತ ನ್ಯಾಯಾಧೀಶ ಮುಹ್ಮದಖಾನ್ ಪಠಾಣ, ಎಂ.ಎಂ. ಕುಕನೂರ ಅವರನ್ನು ಸನ್ಮಾನಿಸಲಾಯಿತು. ಬ್ಯಾಂಕ್‌ನ ಗ್ರಾಹಕರಾದ ನಿವೃತ್ತ ಪ್ರಾಚಾರ್ಯ ಎಂ.ಎಲ್. ಗುಳೇದಗುಡ್ಡ ಡಾ.ಪ್ಯಾರಅಲಿ ನೂರಾನಿ ಮಾತನಾಡಿದರು. ಬಿಲಾಲವಲಿದ ಖಾಲಿದ್ ಕುರಾಣ ಪಠಿಸಿದರು, ಬ್ಯಾಂಕ್ ವ್ಯವಸ್ಥಾಪಕ ನಿರ್ದೇಶಕ ಎ.ಜಿ. ಯರಗುಡಿ ಸ್ವಾಗತಿಸಿದರು. ಪ್ರಾ. ಮುಸ್ತಾನಅಲಿ ಶಿರಹಟ್ಟಿ ಪರಿಚಯಿಸಿ ನಿರೂಪಿಸಿದರು. ಟಿಕಣದಾರ ಹೊಸ ವರ್ಷದ ಗೀತೆ ಹಾಡಿದರು. ಶಾಖಾ ವ್ಯವಸ್ಥಾಪಕ ಆರ್.ಎಂ. ನದಾಫ್ ವಂದಿಸಿದರು.

## ರಾಜ್ಯಮಟ್ಟದ ಪ್ರಶಸ್ತಿ ಪ್ರದಾನ, ಕವಿಗೋಷ್ಠಿ ನಾಳೆ

■ ವಿಜಯಸಾಕ್ಷಿ ಸುದ್ದಿ, ಗದಗ

ಮುಸ್ಲಿಮ್ ಲೇಖಕರ ಸಂಘವು ಮರ್ಹೂಮ್ ಯು.ಟಿ. ಫರೀದ್ ಸ್ಮರಣಾರ್ಥ ಕೊಡಮಾಡುವ 2024ನೇ ಸಾಲಿನ ರಾಜ್ಯ ಮಟ್ಟದ 'ಮುಸ್ಲಿಮ್ ಸಾಹಿತ್ಯ ಪ್ರಶಸ್ತಿ' ಪ್ರದಾನ ಹಾಗೂ ಕನ್ನಡ ಮತ್ತು ಉರ್ದು ಕವಿಗೋಷ್ಠಿಯು ಡಿ. 27ರಂದು ಬೆಳಿಗ್ಗೆ 10.30ಕ್ಕೆ ಗಜೇಂದ್ರಗಡದ ಶ್ರೀ ಜಗದ್ಗುರು ತೋಂಟದಾರ್ಯ ಸಿಬಿಎಸ್‌ಇ ಶಾಲಾ ಸಭಾಂಗಣದಲ್ಲಿ ನಡೆಯಲಿದೆ.

ವಿಧಾನಸಭಾಧ್ಯಕ್ಷ ಯು.ಟಿ. ಖಾದರ್ ಪ್ರಶಸ್ತಿ ಪ್ರದಾನ ಮಾಡಲಿದ್ದು, ಡಾ. ಐ.ಜೆ. ಮ್ಯಾಗೇರಿ (ಕೃತಿ: ಜೈಲ್ ಡೈರಿ) ಪ್ರಶಸ್ತಿ ಸ್ವೀಕರಿಸಲಿದ್ದಾರೆ. ಸಚಿವ ಡಾ. ಎಚ್.ಕೆ. ಪಾಟೀಲ, ಸರ್ಕಾರದ ಮುಖ್ಯ ಸಚೇತಕ ಸಲೀಂ ಅಹ್ಮದ್, ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷ, ಶಾಸಕ ಜಿ.ಎಸ್. ಪಾಟೀಲ ಹಾಗೂ ಶಾಸಕ ಯಾಸಿರ್ ಅಹಮದ್ ಖಾನ್ ಪಠಾಣ್ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಮುಸ್ಲಿಮ್ ಲೇಖಕರ ಸಂಘದ ಅಧ್ಯಕ್ಷ ಉಮರ್ ಯು.ಹೆಚ್. ಸಮಾರಂಭದ ಅಧ್ಯಕ್ಷತೆ ವಹಿಸಲಿದ್ದಾರೆ.

ಕನ್ನಡ ಮತ್ತು ಉರ್ದು ಕವಿಗೋಷ್ಠಿಯಲ್ಲಿ ಕವಿಗಳಾದ ಎ.ಎಸ್. ಮಕಾನದಾರ, ಡಾ. ಹಸೀನಾ ಖಾದ್ರಿ, ಶಿಲ್ಪಾ ಮ್ಯಾಗೇರಿ, ಮೊಹಮ್ಮದ್ ಅರ್ಶದ್ ಹಿರೇಹಾಳ, ಮುರ್ತುಜಾ ಬೇಗಂ ಕೊಡಗಲಿ, ಅನ್ವರ್ ಅಹ್ಮದ್ ವಣಗೇರಿ ಮತ್ತು ಖಾಝಿ ಶಬ್ಬೀರ್ ಅಹ್ಮದ್ ಶಬ್ಬೀರ್ ಮನ್ಸೂರಿ ಭಾಗವಹಿಸಲಿದ್ದಾರೆ. ಮುಸ್ಲಿಮ್ ಲೇಖಕರ ಸಂಘದ ಪ್ರಧಾನ ಕಾರ್ಯದರ್ಶಿ ಬಿ.ಎ. ಮುಹಮ್ಮದ್ ಅಲಿ ಕಾರ್ಯಕ್ರಮ ನಿರೂಪಿಸಲಿದ್ದಾರೆ ಎಂದು ಸಂಘದ ಪ್ರಕಟಣೆ ತಿಳಿಸಿದೆ.



ಕೊಪ್ಪಳದ ಶ್ರೀಗವಿಸಿದ್ಧೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ಜರುಗಲಿರುವ ಮಹಾದಾಸೋಹಕ್ಕಾಗಿ ಸದ್ಭಕ್ತರು ಸಿಹಿ ಪದಾರ್ಥ, ದವಸ-ಧಾನ್ಯ, ರೊಟ್ಟಿಗಳನ್ನು ಶ್ರೀಮಠಕ್ಕೆ ತಂದು ಅರ್ಪಿಸುತ್ತಿದ್ದಾರೆ. ಕೊಪ್ಪಳ ತಾಲೂಕಿನ ಟನಕನಕಲ್ ಗ್ರಾಮದ ಸದ್ಭಕ್ತರಿಂದ 15 ಸಾವಿರ ರೊಟ್ಟಿ, 7 ಪಾಕೆಟ್ ಅಕ್ಕಿ, 58 ಮೆಕ್ಕೆ ಜೋಳ, 2 ಪಾಕೆಟ್ ನೆಲ್ಲು ಇತ್ಯಾದಿಗಳನ್ನು ಟ್ರ್ಯಾಕ್ಟರ್ ಹಾಗೂ ಲಘು ವಾಹನಗಳ ಮೂಲಕ ಭಕ್ತಿ ಭಾವ, ಸಡಗರದೊಂದಿಗೆ ಶ್ರೀಗವಿಮಠಕ್ಕೆ ಆಗಮಿಸಿ ಮಹಾದಾಸೋಹಕ್ಕೆ ಸಲ್ಲಿಸಿದರು. ಇದರಿಂದಾಗಿ ಗವಿಮಠದಲ್ಲಿ ರೊಟ್ಟಿಗಳ ಸಪ್ಪಳ ಆರಂಭವಾಗಿದ್ದು, ದಾನಿಗಳಿಗೆ ಪೂಜ್ಯರು ಆಶೀರ್ವದಿಸಿದ್ದಾರೆ.

## ನಾಳೆ ಉದ್ಯೋಗ ಮೇಳ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಅಕ್ಷರ ಜಾತ್ರೆ-2025ರ ಅಂಗವಾಗಿ ಶ್ರೀ ಅನ್ನದಾನೇಶ್ವರ ಪದವಿ ಮಹಾವಿದ್ಯಾಲಯದ ಆವರಣದಲ್ಲಿ ಡಿ. 27ರಂದು ಬೆಳಿಗ್ಗೆ 9ರಿಂದ ಉದ್ಯೋಗ ಮೇಳ ನಡೆಯಲಿದೆ ಎಂದು ಪ್ರಾಚಾರ್ಯ ಎಸ್.ಜಿ. ಕೇಶಣ್ಣವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಬಿ.ಇ, ಬಿ.ಟೆಕ್, ಬಿ.ಎಸ್ಸಿ, ಬಿಸಿಎ, ಬಿಬಿಎಂ, ಬಿ.ಕಾಂ, ಬಿ.ಎ, ಎಂಸಿಎ, ಎಂ.ಎಸ್ಸಿ, ಎಂಬಿಎ, ಡಿಪ್ಲೋಮಾ ಮತ್ತು ಐಟಿಐ ಪೂರೈಸಿರುವ ಅರ್ಹ ಅಭ್ಯರ್ಥಿಗಳು ಈ ಉದ್ಯೋಗ ಮೇಳದಲ್ಲಿ ಭಾಗವಹಿಸಬಹುದು. ಬೆಂಗಳೂರಿನ ಕ್ಯಾಡ್ಮಾ ಸೊಲ್ಯೂಷನ್ಸ್, ಕ್ರಿಯೇಟಿವ್ ಇಂಜಿನಿಯರ್ಸ್, ಟಾಟಾ ಸೋಲಾರ್ ಪವರ್, ವೀರಭದ್ರೇಶ್ವರ ಉದ್ಯೋಗ ಪ್ರೈ. ಲಿ. ತುಮಕೂರು, ಹುಬ್ಬಳ್ಳಿಯ ವಿಆರ್‌ಎಲ್ ಲಿ, ಹುಬ್ಬಳ್ಳಿಯ ಗುರುಕುಲ ಲಿ, ವೈಟಪ್ ಡಿಸ್ಟಿಲರ್ಸ್ ಮತ್ತು ಶುಗರ್ಸ್, ಅಚೀವರ್ಸ್ ಪ್ರೈ. ಲಿ, ಟೊಯೋಟಾ ಇಂಡಸ್ಟ್ರೀಜ್, ಅಡೆಕೋ ಇಂಡಿಯಾ ಪ್ರೈ. ಲಿ, ಆಟೋಮೋಟಿವ್ ಆಕ್ಸೆಲ್ಸ್ ಲಿ ಇತ್ಯಾದಿ ಕಂಪನಿಗಳು ಪಾಲ್ಗೊಳ್ಳಲಿರುವ ಈ ಬೃಹತ್ ಉದ್ಯೋಗ ಮೇಳದಲ್ಲಿ ಅರ್ಹರು ಪಾಲ್ಗೊಂಡು ಪ್ರಯೋಜನ ಪಡೆದುಕೊಳ್ಳಬೇಕೆಂದು ಪ್ರಕಟಣೆ ತಿಳಿಸಿದೆ. ಹೆಚ್ಚಿನ ಮಾಹಿತಿಗಾಗಿ-9739504869, 9964199317, 9731167314, 9611995603 ಸಂಖ್ಯೆಗಳಿಗೆ ಸಂಪರ್ಕಿಸಬಹುದು.

### ಮಾಜಿ ಪ್ರಧಾನಿ ಅಟಲ್‌ಬಿಹಾರಿ ವಾಜಪೇಯಿ ಜನ್ಮಶತಾಬ್ದಿ ಕಾರ್ಯಕ್ರಮ ಆಚರಣೆ

## ಅಟಲ್‌ಜೀ ಎಲ್ಲರ ಅಚ್ಚುಮೆಚ್ಚಿನ ನಾಯಕ



■ ವಿಜಯಸಾಕ್ಷಿ ಸುದ್ದಿ, ಗದಗ

ದೇಶ ಕಂಡ ಅಪ್ರತಿಮ ನಾಯಕ, ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿರವರ ಜನ್ಮಶತಾಬ್ದಿ ಕಾರ್ಯಕ್ರಮವನ್ನ ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ಕಾರ್ಯಾಲಯದಲ್ಲಿ ಆಚರಿಸಲಾಯಿತು.

ಜಿಲ್ಲಾ ಕೋಶಾಧ್ಯಕ್ಷ ನಾಗರಾಜ ಕುಲಕರ್ಣಿ ಮಾತನಾಡಿ, ಅಟಲ್ ಬಿಹಾರಿ ವಾಜಪೇಯಿಯವರು ಈ ದೇಶ ಕಂಡ ಅಪರೂಪದ, ಹೆಮ್ಮೆಯ ಜನನಾಯಕ. ಉತ್ತಮ ಭಾಷಣಕಾರರಾಗಿ ತಮ್ಮ ಪ್ರಖರ ಮಾತಿನಿಂದ ಜನರನ್ನು ಸೆಳೆಯುತ್ತಿದ್ದರು. ಸಂಸತ್ತಿನಲ್ಲಿ ಯಾವುದೇ ವಿಷಯ ಮಾತನಾಡುವಾಗ ಅಟಲ್‌ಜೀ ತಮ್ಮ ವಾದವನ್ನು ನಿಶ್ಚಿತ ರೂಪದಲ್ಲಿ ಮಂಡಿಸುತ್ತಿದ್ದರು. ಸರಳವಾಗಿ ಎಲ್ಲರಿಗೂ ಅರ್ಥವಾಗುವ ಹಾಗೆ ಮಾತನಾಡುತ್ತಿದ್ದರು. ಎಲ್ಲರೊಂದಿಗೆ ಸ್ನೇಹಮಯ ಜೀವನ ಸಾಗಿಸಿದರು. ಎಲ್ಲ ರಾಜಕೀಯ ಮುಖಂಡರ ಅಚ್ಚುಮೆಚ್ಚಿನ ನಾಯಕರಾಗಿದ್ದರು ಎಂದರು.

ಹಿರಿಯರಾದ ಎಂ.ಎಸ್. ಕರೀಗೌಡ್ರ ಮತ್ತು ಶ್ರೀಪತಿ ಉಡುಪಿ ಸಂದರ್ಭೋಚಿತವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ಪಕ್ಷದ ಹಿರಿಯರಾದ ಜಗನ್ನಾಥಸಾ ಭಾಂಡಗೆ, ಎಂ.ಎಂ. ಹಿರೇಮಠ, ಲಿಂಗರಾಜ ಪಾಟೀಲ ಮಲ್ಲಾಪೂರ, ಬೂದಪ್ಪ ಹಳ್ಳಿ, ರವಿ ದಂಡಿನ, ಭಿಮಸಿಂಗ ರಾಠೋಡ, ಸಿದ್ದು ಪಲ್ಲೇದ, ಅಶೋಕ ಸಂಕಣ್ಣವರ, ನಿರ್ಮಲಾ ಕೊಳ್ಳಿ, ಸಂತೋಷ ಅಕ್ಕಿ, ಅನಿಲ ಅಬ್ಬಿಗೇರಿ, ರಾಘವೇಂದ್ರ ಯಳವತ್ತಿ, ಮಹಾದೇವಪ್ಪ ಚಿಂಚಲಿ, ಶಂಕರ ಕಾಕಿ, ಶಾರದಾ ಸಜ್ಜನರ, ಶಶಿಧರ ದಿಂಡೂರ, ನಾಗರಾಜ ತಳವಾರ, ಕೆ.ಪಿ. ಕೋಟಿಗೌಡ್ರ, ರಮೇಶ ಸಜ್ಜಗಾರ, ರಾಚಯ್ಯ ಹೊಸಮಠ, ನಾಗರಾಜ ಮದ್ನೂರ, ಬಸವರಾಜ ಅಡ್ನೂರ, ಅಪ್ಪಣ್ಣ ಟೆಂಗಿನಕಾಯಿ, ಶಂಕರ ಕರಿಬಿಷ್ಟಿ, ವಿಜಯಲಕ್ಷ್ಮೀ ಮಾನ್ವಿ, ಸ್ವಾತಿ ಅಕ್ಕಿ, ಕವಿತಾ ಬಂಗಾರಿ, ರವಿ ಮಾನ್ವಿ, ಪಾರ್ವತಿ ಪಟ್ಟಣಶೆಟ್ಟಿ, ಶ್ವೇತಾ ದಂಡಿನ, ಪ್ರೀತಿ ಶಿವಪ್ಪನಮಠ, ರೇಖಾ ಗವಳಿ, ಮೋಹನ ಕೋರಿ, ವಿನೋದ ಹಂಸನೂರ ಮುಂಯಾದವರು ಉಪಸ್ಥಿತರಿದ್ದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ತೋಟಪ್ಪ (ರಾಜು) ಕುರುಡಗಿ, ಸುಮಾರು 4 ದಶಕಗಳ ಕಾಲ ರಾಜಕಾರಣದಲ್ಲಿ ಅಜಾತ ಶತ್ರುವೆಂದೇ ಖ್ಯಾತಿ ಪಡೆದ ಅಭಿವೃದ್ಧಿಯ ಹರಿಕಾರ, ದೇಶ ಕಂಡ ಹಿರಿಯ ರಾಜಕೀಯ ಮುತ್ಸದ್ದಿ, ವಿಶ್ವ ಕಂಡ ಧೀಮಂತ ನಾಯಕ ದಿ. ಅಟಲ್ ಬಿಹಾರಿ ವಾಜಪೇಯಿಯವರು. ಕಾಂಗ್ರೆಸ್ಸೇತರ ಪ್ರಧಾನಮಂತ್ರಿಯಾಗಿ ದೀರ್ಘಕಾಲ ಸೇವೆ ಸಲ್ಲಿಸಿದ ವಾಜಪೇಯಿ, ಬಿಜೆಪಿಯ ಸೌಮ್ಯವಾದಿ ಧುರೀಣರೆಂದು ಗುರುತಿಸಿಕೊಂಡಿದ್ದು ಮರೆಯಲಾಗದು ಎಂದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka